ನಮ್ಮ ಜನ
NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 196 ಶೀರ್ಷಿಕೆ ಕೋಡ್: ಕೆಎಆರ್ ಕೆಎನ್ 28269 ಚಿತ್ರದುರ್ಗ ದಿನಾಂಕ: 20–02–2024 ಮಂಗಳವಾರ ಪುಟ: 4 ಬೆಲೆ : ರೂ.2–00
Volume - 01 Issue - 196 Title- Code: KARKAN 28269 Chitradurga Date: 20-02-2024 Tuesday Page: 4 Price: Rs. 2-00

ಒಳಪುಟದ ಸುದ್ದಿಗಳು
ಭದ್ರಾ ನಾಲೆಗೆ ಫೆ.28 ರವರೆಗೆ ನೀರು ಕೊನೆ ಹಂತದ ರೈತರಿಗೆ ತಲುಪಿಸಲು ಕ್ರಮ 2
ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ ಹುಣಸೆಹಣ್ಣು ದರ ನಿಗದಿಯಲ್ಲಿ ಅನ್ಯಾಯದ ಆರೋಪ 3
ಬಸವಣ್ಣ ಸಮಾನತೆ ತತ್ವ ಸಾಕಾರಗೊಳಿಸಲು ಗ್ಯಾರಂಟಿ ಯೋಜನೆಗಳ ಜಾರಿ: ಸಚಿವ 4
ಸುದ್ದಿ, ಜಾಹಿರಾತಿಗೆ 9686622252

ಶುಭ ನುಡಿ

ಮನುಷ್ಯ ಮನೆ ಬದಲಾಯಿಸುತ್ತಾನೆ, ಊರು ಬದಲಾಯಿಸುತ್ತಾನೆ, ಬಟ್ಟೆ ಬದಲಾಯಿಸುತ್ತಾನೆ, ಸ್ನೇಹಿತರನ್ನು ಬದಲಾಯಿಸುತ್ತಾನೆ, ಆದರೂ ಅವನಿಗೆ ನೆಮ್ಮದಿ ಇಲ್ಲ ಏಕೆ,..! ಏಕೆಂದರೆ ಅವನು ತನ್ನನ್ನು ತಾನು ಬದಲಾಯಿಸಿಕೊಳ್ಳುವುದಿಲ್ಲ..

» ಶುಭೋದಯ

ಫಾಸ್ಟ್ ನ್ಯೂಸ್

ಯುಗಾದಿ ನಂತರ ರಾಜ್ಯದಲ್ಲಿ ಒಳ್ಳೆ ಬೆಳೆ-ಮಳೆ ಕೋಡಿಶ್ರೀ ಭವಿಷ್ಯ

» ಕೋಲಾರ

ಯುಗಾದಿ (Ugadi)ಕಳೆದನಂತರರಾಜ್ಯದಲ್ಲಿಒಳ್ಳೆ ಬೆಳೆ ಮತ್ತು ಮಳೆಯಾಗುವ ಲಕ್ಷಣಗಳಿವೆ ಎಂದು ಕೋಡಿಮಠದ ಡಾ. ಶಿವಾನಂದ ಶಿವಯೋಗಿ ರಾಜೇಂದ್ರ ಸ್ವಾಮೀಜಿ ಭವಿಷ್ಯ ನುಡಿದಿದ್ದಾರೆ. ಸದ್ಯ ಮಳೆ–ಬೆಳೆ ಇಲ್ಲದೇ ಕಂಗಾಲಾಗಿರುವ ರೈತರಿಗೆ ಒಂದು ಸಮಾಧಾನಕರ ಭವಿಷ್ಯವೊಂದನ್ನು ಹೇಳಿದ್ದಾರೆ. ಅಲ್ಲದೇ ಮತಾಂತರ ಹೆಚ್ಚಾಗುತ್ತದೆ, ಬಾಂಬ್ ಸ್ಫೋಟ, ಭೂಕಂಪ ಆಗುತ್ತೆ. ಧಾರ್ಮಿಕ ಮುಖಂಡನ ಸಾವು ಸಹ ಆಗಲಿದೆ ಎಂದು ಆಘಾತಕಾರಿ ಭವಿಷ್ಯ ನುಡಿದಿದ್ದಾರೆ. ಕೋಲಾರದ ಜಿಲ್ಲೆ ಮಾಲೂರು ಪಟ್ಟಣದ ಕಾರ್ಯಕ್ರಮವೊಂದರಲ್ಲಿ ಮಾತನಾಡಿರುವ ಕೋಡಿ ಮಠದ ಡಾ.ಶಿವನಂದ ಶಿವಯೋಗಿ ಸ್ವಾಮೀಜಿ, ಯುಗಾದಿ ಕಳೆದ ನಂತರ ರಾಜ್ಯದಲ್ಲಿ ಒಳ್ಳೆ ಬೆಳೆ ಮತ್ತು ಮಳೆಯಾಗುವ ಲಕ್ಷಣಗಳಿವೆ ಎಂದು ಭವಿಷ್ಯ ನುಡಿದರು. ಇನ್ನು ಇದೇ ವೇಳೆ ರಾಜ್ಯ ರಾಜಕೀಯ ಬಗ್ಗೆ ಯುಗಾದಿ ಕಳೆದ ನಂತರ ಹೇಳುವೆ, ಇನ್ನ ಸಾಕಷ್ಟು ಸಮಯವಿದೆ ಎಂದರು. ಗ್ಯಾರೆಂಟ್ ಗಳಿಂದ ಸರ್ಕಾರ ನಡೆಯುತ್ತಿದ್ದೀಯಾ ಎಂಬ ಪ್ರಶ್ನೆಗೆ ಉತ್ತರಿಸಿದ ಶ್ರೀಗಳು, ನನ್ನಗಿಂತ ನಿಮಗೆ ಚೆನ್ನಾಗಿ ಗೊತ್ತು. ರಾಷ್ಟ್ರ ರಾಜಕಾರಣ ಸಹ ಯುಗಾದಿ ಮೇಲೆ ಗೊತ್ತಾಗುತ್ತದೆ. ಯುಗಾದಿ ನಂತರ ಭವಿಷ್ಯ ಬರುವುದು. ಒಂದು ತಿಂಗಳು ಕಳೆದ ಮೇಲೆ ಮಳೆ, ಬೇಳೆ, ರಾಜಕೀಯ, ದುಡಿಮೆ, ವ್ಯಾಪಾರ ಎಲ್ಲಾ ಗೊತ್ತಾಗಲಿದೆ ಎಂದು ಹೇಳಿದರು. ಜಾಗತಿಕ ಮಟ್ಟದಲ್ಲಿ ತೊಂದರೆ ಇದೆ. ಬೆಂಕಿ ಹಾವಳಿ,ನೀರಿನ ಹಾವಳಿ, ಯುದ್ದ ಆಗುತ್ತೆ. ಅನೇಕ ಸಾವು ನೋವುಗಳು ಆಗುತ್ತೆ. ಮತಾಂತರ ಹೆಚ್ಚಾಗುತ್ತದೆ. ಬಾಂಬ್ ಸ್ಫೋಟ, ಭೂಕಂಪ ಆಗುತ್ತೆ. ಧಾರ್ಮಿಕ ಮುಖಂಡನ ಸಾವು ಸಹ ಆಗಲಿದೆ ಎಂದು ಸ್ಫೋಟಕ ಭವಿಷ್ಯ ನುಡಿದರು.

ಫೆ.20ರಂದು ಕಾನೂನು ಅರಿವು-ನೆರವು ಕಾರ್ಯಕ್ರಮ

» ಚಿತ್ರದುರ್ಗ

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ವಕೀಲರ ಸಂಘ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ಹಾಗೂ ಸರಸ್ವತಿ ಕಾನೂನು ಕಾಲೇಜ್ ಇವರ ಸಹಯೋಗದಲ್ಲಿ ವಿಶ್ವ ಸಾಮಾಜಿಕ ನ್ಯಾಯ ದಿನಾಚರಣೆ ಅಂಗವಾಗಿ ಸಂವಿಧಾನ ದೃಷ್ಟಿಯಲ್ಲಿ ಸಾಮಾಜಿಕ ನ್ಯಾಯದ ಬಗ್ಗೆ ಕಾನೂನು ಅರಿವು ನೆರವು ಕಾರ್ಯಕ್ರಮವನ್ನು ಫೆ.20ರಂದು ಬೆಳಿಗ್ಗೆ 10 ಗಂಟೆಗೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಕಾರ್ಯಕ್ರಮ ಉದ್ಘಾಟಿಸುವರು. ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಎಂ.ವಿಜಯ್, ವಕೀಲ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿ, ಉಪಾಧ್ಯಕ್ಷ ಬಿ.ಎಂ. ಅನಿಲ್ ಕುಮಾರ್, ಪ್ರಧಾನ ಕಾರ್ಯದರ್ಶಿ ಆರ್. ಗಂಗಾಧರ್ ಭಾಗವಹಿಸುವರು. ಸರಸ್ವತಿ ಕಾನೂನು ಕಾಲೇಜ್ ಪ್ರಾಂಶುಪಾಲೆ ಎಂ.ಎಸ್.ಸುಧಾದೇವಿ ಉಪನ್ಯಾಸ ನೀಡುವರು ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

ಕುಡಿಯುವ ನೀರಿನ ಸಮಸ್ಯೆಗೆ ತ್ವರಿತವಾಗಿ ಸ್ಪಂದಿಸಬೇಕು, ನಿರ್ಲಕ್ಷ್ಯ ತೋರಿದರೆ ಶಿಸ್ತು ಕ್ರಮ

ಬರ ಪರಿಹಾರ ಕಾರ್ಯಕ್ರಮಗಳ ಪ್ರಗತಿ ಕುರಿತು ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಅಧಿಕಾರಿಗಳಿಗೆ ಸೂಚನೆ

» ಚಿತ್ರದುರ್ಗ

ಬೇಸಿಗೆ ಸಂದರ್ಭದಲ್ಲಿ ಕುಡಿಯುವ ನೀರಿನ ಅಭಾವ ಹೆಚ್ಚಾಗುವ ಸಂಭವವಿದೆ ಹಾಗಾಗಿ ಕುಡಿಯುವ ನೀರಿನ ಸಮಸ್ಯೆಗೆ ಅಧಿಕಾರಿಗಳು ತ್ವರಿತವಾಗಿ ಸ್ಪಂದಿಸಬೇಕು. ಕುಡಿಯುವ ನೀರು ಸಮಸ್ಯೆಗೆ ಸ್ಪಂದಿಸದ ಸಂಬಂಧಪಟ್ಟ ಗ್ರಾಮ ಪಂಚಾಯಿತಿ ಪಿಡಿಒ, ತಾಲ್ಲೂಕು ಪಂಚಾಯಿತಿ ಇಒ ಹಾಗೂ ತಹಶೀಲ್ದಾರ್‌ಗಳನ್ನು ನೇರ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಬರಪರಿಹಾರ ಕಾರ್ಯಕ್ರಮಗಳ ಪ್ರಗತಿ ಕುರಿತು ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಕಂಡುಬಂದಲ್ಲಿ ಅಧಿಕಾರಿಗಳು ತಕ್ಷಣವೇ ಸಮಸ್ಯೆ ಬಗೆಹರಿಸಲು ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು. ಕುಡಿಯುವ ನೀರಿನ ಸಮಸ್ಯೆ ಗಂಭೀರವಾದರೆ ತಕ್ಷಣವೇ ಟ್ಯಾಂಕರ್ ಮೂಲಕ ಕುಡಿಯುವ ನೀರು ಪೂರೈಕೆ ಮಾಡಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಮಾತನಾಡಿ, ಪ್ರಸ್ತುತ ಜಿಲ್ಲೆಯಲ್ಲಿ 367 ಗ್ರಾಮಗಳನ್ನು ಸಮಸ್ಯಾತ್ಮಕ ಗ್ರಾಮಗಳನ್ನಾಗಿ ಗುರುತಿಸಲಾಗಿದೆ, ಈ ಸಂಖ್ಯೆ ದಿನದಿಂದ ದಿನಕ್ಕೆ ಪರಿಷ್ಕೃತಗೊಳ್ಳುತ್ತಿದೆ. ಬರನಿರ್ವಹಣೆಗೆ ಸಂಬಂಧಪಟ್ಟಂತೆ ಈಗಾಗಲೇ ಜಿಲ್ಲಾ ಮಟ್ಟದಲ್ಲಿ ಸಭೆ ನಡೆಸಲಾಗಿದ್ದು, ಶಾಸಕರ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮಟ್ಟದ ಟಾಸ್ಕ್‌ಫೋರ್ಸ್ ಸಮಿತಿ ಸಭೆ ನಡೆಸಿ, ಕುಡಿಯುವ ನೀರಿನ ಸಮಸ್ಯೆಗೆ ಸಂಬಂಧಪಟ್ಟಂತೆ ಸಭೆಯ ನಡಾವಳಿಯನ್ನುಜಿಲ್ಲಾಮಟ್ಟಕ್ಕೆಸಲ್ಲಿಸುವಂತೆ ಈಗಾಗಲೇ ಸೂಚನೆ ನೀಡಲಾಗಿದೆ. ಕುಡಿಯುವ ನೀರಿಗೆ ಸಂಬಂಧಪಟ್ಟಂತೆ ತುರ್ತು ಕಾಮಗಾರಿಗಳಿಗಾಗಿ ಈಗಾಗಲೇ ಜಿಲ್ಲೆಯ ಆರು ತಾಲ್ಲೂಕುಗಳಿಗೂ ರೂ.40 ಲಕ್ಷ ಅನುದಾನ ಒದಗಿಸಲಾಗಿದೆ. ಇದರ ಜೊತೆಗೆ ಗ್ರಾಮೀಣಾಭಿವೃದ್ಧಿ ಇಲಾಖೆ ವತಿಯಿಂದಲೂ ಪ್ರತಿ ತಾಲ್ಲೂಕಿಗೂ ರೂ.25 ಲಕ್ಷಅನುದಾನವನ್ನುಹಂಚಿಕೆಮಾಡಲಾಗಿದೆ. ಜಿಲ್ಲಾಧಿಕಾರಿಗಳ ಖಾತೆಯಲ್ಲಿ ರೂ.9 ಕೋಟಿ ಹಣವಿದೆ. ಬೋರ್‌ವೆಲ್‌ಗಳಲ್ಲಿ ಇಳುವರಿ ಕಡಿಮೆಯಾಗಿದ್ದು, ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲು ಟೆಂಡರ್ ಕರೆಯಲಾಗಿದೆ. ಕುಡಿಯುವ ನೀರಿನ ಪೂರೈಕೆಗೆ ಸಂಬಂಧಪಟ್ಟಂತೆ ಅನುದಾನದ ಕೊರತೆ ಇಲ್ಲ ಎಂದು ತಿಳಿಸಿದ ಅವರು, ಕುಡಿಯುವ ನೀರು ಸಮಸ್ಯೆಗೆ ಸಂಬಂದಪಟ್ಟಂತೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸಹಾಯವಾಣಿ ಸ್ಥಾಪಿಸಲಾಗಿದೆ ಎಂದರು. ಜಿಲ್ಲೆಯ ಎಲ್ಲಾ ತಾಲ್ಲೂಕುಗಳನ್ನು ಬರಪೀಡಿತ ತಾಲ್ಲೂಕುಗಳು ಎಂಬುದಾಗಿ ಸರ್ಕಾರ ಘೋಷಿಸಿದ್ದು, ಬರಪೀಡಿತ ತಾಲ್ಲೂಕುಗಳ ವ್ಯಾಪ್ತಿಯಲ್ಲಿ ಜನ–ಜಾನುವಾರುಗಳಿಗೆ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವುದು ನಮ್ಮ ಆದ್ಯತೆಯಾಗಿದೆ. ಗ್ರಾಮ ಪಂಚಾಯಿತಿ ಪಿಡಿಒಗಳು ನಮ್ಮ ಬಳಿ ಅನುದಾನವಿಲ್ಲ ಎಂದು ಸಬೂಬು ಹೇಳುವಂತಿಲ್ಲ. ಈ ರೀತಿಯ ಸಬೂಬು ಹೇಳಿ ನೀರಿನ ಸಮಸ್ಯೆಯನ್ನು ಪರಿಹರಿಸದ ಪಿಡಿಒ ಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ವಿಪತ್ತು ಪರಿಹಾರ ನಿಧಿಯನ್ನು ಪಂಚಾಯತಿಗಳಿಗೆ ನೇರವಾಗಿ ಬಿಡುಗಡೆ ಮಾಡಲಾಗುವುದಿಲ್ಲ. ಪಿಡಿಒ ಗಳು ಕುಡಿಯುವ ನೀರಿನ ಸಮಸ್ಯೆಗೆ ತಕ್ಷಣ ಸ್ಪಂದಿಸಬೇಕು. ನೀರಿನ ಸಮಸ್ಯೆ ಗಂಭೀರವಾದರೆ ಟ್ಯಾಂಕರ್ ನೀರು ಕೊಡಬೇಕು. ನಂತರ ಕುಡಿಯುವ ನೀರಿನ ಮೊತ್ತ ಪಾವತಿಗೆ ತಹಶೀಲ್ದಾರ್ ಅಧ್ಯಕ್ಷತೆಯ ಸಮಿತಿಗೆ ನಿಯಮಾನುಸಾರ ಬಿಲ್ ಸಲ್ಲಿಸಿದಲ್ಲಿ ಪಾವತಿಗೆ ಕ್ರಮ ವಹಿಸಲಾಗುವುದು ಎಂದು ಹೇಳಿದರು.

ಜಾನುವಾರುಗಳಿಗೆ ಮೇವು : ಜಿಲ್ಲೆಯಲ್ಲಿ ಈಗಾಗಲೆ ತಾಲ್ಲೂಕಿನ ತುರುವನೂರು ಹೋಬಳಿ, ಚಳ್ಳಕೆರೆ ತಾಲ್ಲೂಕಿನ ಚೌಳೂರು ಗೇಟ್ ಹಾಗೂ ಅಜ್ಜನಗುಡಿ ಗ್ರಾಮದಲ್ಲಿ ಗೋಶಾಲೆತೆರೆಯಲಾಗಿದೆ.ಗೋಶಾಲೆಯಲ್ಲಿ ಈವರೆಗೆ 11564 ಜಾನುವಾರುಗಳಿಗೆ 67.550 ಟನ್ ಮೇವು ಪೂರೈಸಲಾಗಿದೆ. ಬೋರ್‌ವೆಲ್ ಹೊಂದಿರುವ ರೈತರಿಗೆ ಮೇವು ಬೆಳೆಸಿಕೊಳ್ಳಲು ಮೇವಿನ ಬೀಜದ ಕಿಟ್ ನೀಡಲು ಕೂಡ ಕ್ರಮ ವಹಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ಹೇಳಿದರು. ಶಾಸಕ ರಘುಮೂರ್ತಿ ಮಾತನಾಡಿ, ಅಗತ್ಯಕ್ಕೆ ಅನುಗುಣವಾಗಿ ಹಾಗೂ ಬೇಡಿಕೆಯಾನುಸಾರ ಗೋಶಾಲೆ ತೆರೆಯಲು ಸಿದ್ಧತೆ ಮಾಡಿಕೊಳ್ಳಬೇಕು. ಗೋಶಾಲೆಗಳಿಗೆ ಖರೀದಿಸುವ ಮೇವಿನಲ್ಲಿ ಶೇ. 50 ರಷ್ಟು ಭತ್ತದ ಹುಲ್ಲು, ಶೇ. 25 ರಷ್ಟು ರಾಗಿ, ಜೋಳದ ದಂಟು ಉಳಿದ ಪ್ರಮಾಣದಲ್ಲಿ ಇತರೆ ಮೇವು ಖರೀದಿಸಲು ಕ್ರಮ ವಹಿಸಬೇಕು ಎಂದು ತಿಳಿಸಿದರು.

ಜಿಯಾಲಾಜಿಸ್ಟ್ ಹುದ್ದೆಗೆ ಭರ್ತಿಗೆ ಕ್ರಮ ವಹಿಸಿ: ಜಿಲ್ಲೆಯ ಆರು ತಾಲ್ಲೂಕುಗಳನ್ನು ಒಳಗೊಂಡಂತೆ ಕೇವಲ ಒಬ್ಬರೇ ಜಿಯಾಲಾಜಿಸ್ಟ್ ಇದ್ದಾರೆ. ಬೇಸಿಗೆ ಕಾಲವಾಗಿರುವುದರಿಂದ, ವಿವಿಧೆಡೆ ಹೊಸ ಬೋರ್‌ವೆಲ್ ಕೊರೆಯಿಸಬೇಕಾಗುತ್ತದೆ, ಹೀಗಾಗಿ ತುರ್ತಾಗಿ ನೀರಿನ ಪಾಯಿಂಟ್ ಮಾಡಬೇಕಾಗುತ್ತದೆ. ಆದರೆ ಜಿಲ್ಲೆಯಲ್ಲಿ ಜಿಯಾಲಾಜಿಸ್ಟ್ ಕೊರತೆ ಇದ್ದು, ಎರಡು ತಾಲ್ಲೂಕಿಗೆ ಒಬ್ಬರಂತೆ ಕನಿಷ್ಟ ಮೂರು ಮಂದಿ ಜಿಯಾಲಾಜಿಸ್ಟ್‌ಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳುವಂತೆ ಹೊಸದುರ್ಗ ಶಾಸಕ ಬಿ.ಜಿ.ಗೋವಿಂದಪ್ಪ ಅಧಿಕಾರಿಗಳಿಗೆ ಸೂಚನೆ ನೀಡಿದರು.ಇದೇ ಸಂದರ್ಭದಲ್ಲಿ ಫೆ.27 ಮತ್ತು 28 ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದಿಂದ ನಡೆಯುವ ರಾಜ್ಯಮಟ್ಟದ ಬೃಹತ್ ಉದ್ಯೋಗ ಮೇಳದ ಪೋಸ್ಟರ್‌ನ್ನು ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಬಿಡುಗಡೆ ಮಾಡಿದರು.

ಸಭೆಯಲ್ಲಿ ಶಾಸಕರಾದ ಬಿ.ಜಿ.ಗೋವಿಂದಪ್ಪ, ಟಿ.ರಘುಮೂರ್ತಿ, ಎಂ.ಚಂದ್ರಪ್ಪ, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿ.ಪಂ ಸಿಇಒ ಎಸ್.ಜೆ.ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತೀಕ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಇಂಜಿನಿಯರ್ ಬಸವನಗೌಡ ಪಾಟೀಲ್, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹೇಂದ್ರ ಕುಮಾರ್, ಪೌರಾಯುಕ್ತೆ ಎಂ.ರೇಣುಕಾ ಸೇರಿದಂತೆ ತಹಶೀಲ್ದಾರ್‌ಗಳು,ತಾಲ್ಲೂಕು ಪಂಚಾಯಿತಿ ಇಒಗಳು ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

26.86 ಕೋಟಿ ಬೆಳೆನಷ್ಟ ಪರಿಹಾರ ಪಾವತಿ

ಮಳೆಯ ಕೊರತೆಯಿಂದ ಬೆಳೆನಷ್ಟ ಉಂಟಾದ ಜಿಲ್ಲೆಯ 1,38,226 ರೈತರಿಗೆ 26.86 ಕೋಟಿ ರೂ. ಗಳನ್ನು ಬೆಳೆನಷ್ಟ ಪರಿಹಾರ ಪಾವತಿ ಮಾಡಲಾಗಿದ್ದು, ಈ ಪರಿಹಾರ ಮೊತ್ತವನ್ನು ರಾಜ್ಯ ಸರ್ಕಾರದಿಂದ ಒದಗಿಸಲಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಮಾಹಿತಿ ನೀಡಿದರು.

ಬೋರ್‌ವೆಲ್‌ಗೆ ಸರ್ಕಾರಕ್ಕೆ ಪ್ರಸ್ತಾವನೆ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಚಿವರು ಕಳೆದ ಫೆ. 02 ರಂದು ಇಲಾಖಾಧಿಕಾರಿಗಳ ಸಭೆ ನಡೆಸಿದ್ದು, ಅತ್ಯಂತ ತುರ್ತು ಸಂದರ್ಭದಲ್ಲಿ ಕೊನೆಯ ಆಯ್ಕೆಯಾಗಿ ಹೊಸ ಬೋರ್‌ವೆಲ್ ಕೊರೆಯಿಸಲು ಕ್ರಮ ವಹಿಸಬೇಕು ಎಂದು ಈ ಸಭೆಯಲ್ಲಿ ತಿಳಿಸಿದ್ದು, ಸಭೆಯ ನಡಾವಳಿ ಬಂದಿರುತ್ತದೆ ಎಂದು ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ. ಸೋಮಶೇಖರ್ ಸಭೆಗೆ ಮಾಹಿತಿ ನೀಡಿದರು. ಈ ಸಭೆಯ ನಡಾವಳಿಯನ್ನು ಆಧರಿಸಿ, ಹೊಸ ಬೋರ್‌ವೆಲ್‌ಗಳನ್ನು ಅಗತ್ಯಕ್ಕೆ ಅನುಗುಣವಾಗಿ ತುರ್ತು ಅವಶ್ಯವಿರುವೆಡೆ ಕೊರೆಯಿಸುವ ಬಗ್ಗೆ ಮಾರ್ಗಸೂಚಿ ನೀಡುವಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಸಭೆಯಲ್ಲಿ ನಿರ್ಣಯ ಕೈಗೊಳ್ಳಲಾಯಿತು.

ಪ್ರಮುಖ ಸುದ್ದಿ

12000 ಹೆಕ್ಟೇರ್ ಕೃಷಿಭೂಮಿಯ ಬೇಸಿಗೆ ಹಂಗಾಮಿನ ಬೆಳೆಗೆ ನೀರು ಲಭ್ಯ –ಬರಗಾಲಕ್ಕೆ ತುತ್ತಾದ ಹಿರಿಯೂರು ತಾಲ್ಲೂಕಿನ 42 ಹಳ್ಳಿ ಅಂತರ್ಜಲ ಅಭಿವೃದ್ಧಿ ನಿರೀಕ್ಷೆ

ಫೆ.20ರಿಂದ ವಿ.ವಿ.ಸಾಗರ ಅಚ್ಚುಕಟ್ಟು ಪ್ರದೇಶಕ್ಕೆ ನೀರು

» ಚಿತ್ರದುರ್ಗ

ವಾಣಿ ವಿಲಾಸ ಸಾಗರ ಜಲಾಶಯದ ಮೇಲ್ಮಟ್ಟ, ಬಲನಾಲ, ಎಡನಾಲ ಅಚ್ಚುಕಟ್ಟು ಪ್ರದೇಶದ ಗ್ರಾಮಗಳ ಸುಮಾರು 12 ಸಾವಿರ ಹೆಕ್ಟೇರ್ ಕೃಷಿಭೂಮಿಗೆ 2023–24ನೇ ಸಾಲಿನ ಬೇಸಿಗೆ ಹಂಗಾಮಿಗೆ, ಫೆ.20 ರಿಂದ ಒಂದು ತಿಂಗಳ ಕಾಲ ನೀರು ಹರಿಸಲು ಜಿಲ್ಲಾ ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಗಿದೆ.

ಈ ಕುರಿತು ಸೋಮವಾರ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ, ಯೋಜನೆ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಉಪಸ್ಥಿತಿಯಲ್ಲಿ, ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧ್ಯಕ್ಷತೆಯಲ್ಲಿ ನೀರಾವರಿ ಸಲಹಾ ಸಮಿತಿ ಸಭೆ ಜರುಗಿತು.ಜಿಲ್ಲಾ ನೀರಾವರಿ ಸಲಹಾ ಸಮಿತಿ ಅಧಿಕಾರೇತರ ಸದಸ್ಯರು, ಈ ಬಾರಿ ಭೀಕರ ಬರಗಾಲ ಎದುರಾಗಿದೆ. ವಿ.ವಿ.ಸಾಗರ ಅಚ್ಚುಕಟ್ಟು ಪ್ರದೇಶದಲ್ಲಿ ತೋಟಗಳು ಹಾಗ ಬೆಳೆಗಳು ನೀರಿಲ್ಲದೆ ಒಣಗುತ್ತಿವೆ. ಬೊರ್‌ವೆಲ್‌ಗಳು ಬತ್ತಿ ಕೆಲ ಹಳ್ಳಿಗಳಲ್ಲಿ ಕುಡಿಯುವ ನೀರಿಗೂ ತೊಂದರೆಯಾಗಿದೆ. ತಕ್ಷಣವೇ ವಿ.ವಿ.ಸಾಗರ ಜಲಾಶಯದಲ್ಲಿ ನೀರಿನ ಸಂಗ್ರಹದಲ್ಲಿ ಬೇಸಿಗೆ ಹಂಗಾಮಿಗೆ ಕನಿಷ್ಠ 40 ದಿನಗಳ ಕಾಲ ನಾಲೆಗಳ ಮೂಲಕ ನೀರು ಹರಿಸುವಂತೆ ಸಭೆಯಲ್ಲಿ ಬೇಡಿಕೆಯನ್ನಿಟ್ಟರು.

ಅಚ್ಚುಕಟ್ಟು ಪ್ರದೇಶದಲ್ಲಿ ತೋಟಗಾರಿಕೆ ಬೆಳೆಗಳಾದ ಅಡಿಕೆ, ತೆಂಗು, ಬಾಳೆಗಳ ಜೊತೆಗೆ ರೈತರು ಕೃಷಿ ಬೆಳೆಗಳಾದ ಶೇಂಗಾ, ಸೂರ್ಯಕಾಂತಿ, ಮೆಕ್ಕೆಜೋಳ, ರಾಗಿ ಬೆಳೆಗಳನ್ನು ರೈತರು ಬಿತ್ತನೆ ಮಾಡಿದ್ದಾರೆ. ಸದರಿ ಬೆಳೆಗಳು ಬೆಳವಣಿಗೆ ಹಂತದಲ್ಲಿ ಇದ್ದು, ಸೂರ್ಯನ ತಾಪಮಾನಕ್ಕೆ ಸಿಲುಕಿ ಬೆಳೆಗೆ ಹಾನಿಯಾಗಿ ನಷ್ಟ ಸಂಭವಿಸಬಹುದು. ಆದ್ದರಿಂದ ಕೂಡಲೇ ವಿ.ವಿ.ಸಾಗರ ಜಲಾಶಯದಿಂದ ನೀರು ಹರಿಸುವಂತೆ ಕೃಷಿ ಹಾಗೂ ತೋಟಗಾರಿಕೆ ಅಧಿಕಾರಿಗಳು ವರದಿ ಸಲ್ಲ

ಚಿನ್ನದ ಬೆಲೆ	
91.6 ಕೆಡಿಎಂ (ಗ್ರಾಂ)	5830
85 ಕೆಡಿಎಂ (ಗ್ರಾಂ)	5330

ಬೆಳ್ಳಿ ಬೆಲೆ	
ಕೆಜಿ	67500

ಫಾಸ್ಟ್ ನ್ಯೂಸ್

ಅರಣ್ಯ ದಿನಗೂಲಿ ನೌಕರರ ವೇತನ ಬಿಡುಗಡೆಗೆ ಆಗ್ರಹ

» ಚಿತ್ರದುರ್ಗ

ಸಾಮಾಜಿಕ ಅರಣ್ಯ ವಿಭಾಗದಲ್ಲಿ ದಿನಗೂಲಿ ಮೇಲೆ

ಕಾರ್ಯ ನಿರ್ವಹಿಸುತ್ತಿರುವ ನೌಕರರಿಗೆ 2023 ಏಪ್ರಿಲ್‌ನಿಂದ ವೇತನವನ್ನು ಪಾವತಿ ಮಾಡದಿರುವುದನ್ನು ಕರ್ನಾಟಕ ರಾಜ್ಯ ದಿನಗೂಲಿ/ಪಿಸಿಪಿ/ಹೊರಗುತ್ತಿಗೆ ಕ್ಷೇಮಾಭೀವೃದ್ಧಿ ನೌಕರರ ಸಂಘದ ತೀವ್ರವಾಗಿ ಖಂಡಿಸಿದ್ದು ಕೊಡಲೇ ದಿನಗೂಲಿ ನೌಕರರಿಗೇ ವೇತನವನ್ನು ಪಾವತಿ ಮಾಡಬೇಕು ಇಲ್ಲವಾದರೆ ಅವರಿಗೆ ಏನಾದರೂ ಅನಾಹುತವಾದರೆ ಇಲಾಖೆಯೇ ಹೊಣೆಯಾಗಿರುತ್ತದೆ ಎಂದು ಸಂಘದ ಅಧ್ಯಕ್ಷ ನಾಗರಾಜ್ ಸಂಗಮ್ ಎಚ್ಚರಿಸಿದ್ದಾರೆ.

ಈ ಬಗ್ಗೆ ಸಾಮಾಜಿಕ ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ಮನವಿಯನ್ನು ನೀಡಿ ಮಾಧ್ಯಮಕ್ಕೆ ಹೇಳಿಕೆಯನ್ನು ನೀಡಿರುವ ನಾಗರಾಜ್ ಸಂಗಮ್ ಜಿಲ್ಲೆಯ ಮೊಳಕಾಲ್ಮೂರು ಸಾಮಾಜಿಕ ಅರಣ್ಯ ವಿಭಾಗದಲ್ಲಿ ಹಲವಾರು ವರ್ಷಗಳಿಂದ ರಸ್ತೆ ಬದಿಯಲ್ಲಿ ಹಾಗೂ ನರ್ಸರಿಗಳಲ್ಲಿ ದಿನಗೂಲಿ ನೌಕರರಾಗಿ ಕಾರ್ಯ ನಿರ್ವಹಿಸುತ್ತಿರುವ ನೌಕರರು ಇಂದಿಗೂ ಸಹಾ ದಿನಗೂಲಿ ನೌಕರರಾಗಿಯೇ ಇದ್ದಾರೆ ಇನ್ನೂ ಖಾಯಾಂ ಆಗಿಲ್ಲ, ವಲಯ ಅರಣ್ಯ ಇಲಾಖೆಯಲ್ಲಿ ಎಂದಿನಂತೆ ವೇತನ ಪಾವತಿಯಾಗುತ್ತಿದೆ ಆದರೆ ಈಗ ಸಾಮಾಜಿಕ ಅರಣ್ಯ ಇಲಾಖೆಯಲ್ಲಿ ದಿನಗೂಳಿಗಳಾಗಿ ಕೆಲಸ ಮಾಡುತ್ತಿರುವವರಿಗೆ 2023 ಏಪ್ರಿಲ್‌ನಿಂದ ವೇತನ ಪಾವತಿಯಾಗಿಲ್ಲ, ಇಂದು ಆಗುತ್ತೇ ನಾಳೆ ಆಗುತ್ತೇ ಎಂದು ಜನವರಿ 2024ರವರೆಗೂ ಕಾಯಲಾಯಿತು. ಆದರೂ ಸಹಾ ವೇತನ ಪಾವತಿಯಾಗಿಲ್ಲ, ಇದರ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳನ್ನು ಬೇಟಿ ಮಾಡಿ ವೇತನ ಪಾವತಿಯ ಬಗ್ಗೆ ಮನವಿ ಮಾಡಿದಾಗ ಅವರು ಎನ್.ಆರ್.ಇ.ಜಿ.ಎ. ಯೋಜನೆಯಡಿ ವೇತನ ಪಾವತಿ ಮಾಡುತ್ತೇವೆ. ಆದರೆ ಹಣ ಬಂದಿಲ್ಲ ಅದಕ್ಕೆ ನಿಮ್ಮ ಜಾಬ್ ಕಾರ್ಡು ಕೂಡಿ ಅದರಲ್ಲಿ ನಿಮ್ಮ ವೇತನ ಹಾಕುತ್ತೇವೆ ಎಂದು ಉತ್ತರಿಸಿದ್ದಾರೆ. ಅಧಿಕಾರಿಗಳ ಈ ಉತ್ತರದಿಂದ ನೌಕರರಿಗೆ ತುಂಬಾ ತೊಂದರೆಯಾಗಿದೆ, ಅಲ್ಲದೆ ಇಷ್ಟ ಇದ್ದರೆ ಕೆಲಸಕ್ಕೆ ಬನ್ನಿ ಇಲ್ಲವಾದರೆ ಬಿಡಿ ಎಂಬ ಉತ್ತರ ಕೇಳಿ ಬರುತ್ತಿದೆ. ಕಳೆದ 15–20 ವರ್ಷಗಳ ದಿನಗೂಲಿ ನೌಕರರಾಗಿ ಸೇವೆಯನ್ನು ಸಲ್ಲಿಸಿದ್ದಾರೆ. ಕಳೆದ 2 ವರ್ಷದಿಂದ ಈ ರೀತಿಯ ಸಮಸ್ಯೆ 20 ಜನರಿಗೆ ಉಂಟಾಗಿದೆ. ಇವರು ತುಂಬಾ ಕಷ್ಟದಲ್ಲಿ ಇದ್ದಾರೆ, ಈ ತಕ್ಷಣವೇ ವೇತನವನ್ನು ಪಾವತಿ ಮಾಡಲು ಕ್ರಮ ತೆಗೆದುಕೊಳ್ಳಬೇಕಿದೆ, ವೇತನ ಪಾವತಿಯಾಗದಿದ್ದರೆ ಅವರ ಜೀವನ ನಿರ್ವಹಣೆ ತುಂಬಾ ಕಷ್ಟವಾಗುತ್ತದೆ. ಆರ್ಥಿಕವಾಗಿ ತೊಂದರೆಯಲ್ಲಿದ್ದಾರೆ. ಮುಂದೆ ಏನಾದರೂ ಇವರಿಗೆ ಅನಾಹುತ ಸಂಬಂಧಿಸಿದರೆ ಅದಕ್ಕೆ ಅರಣ್ಯ ಇಲಾಖೆಯೆ ಹೊಣೆಯಾಗಿರುತ್ತದೆ ಎಂದು ನಾಗರಾಜ್ ಸಂಗಮ್ ಅಧಿಕಾರಿಗಳನ್ನು ಎಚ್ಚರಿಸಿದ್ದಾರೆ.

ಎಸ್‌ಡಿಕೆ ರಾಜ್ಯ ಎಸ್‌ಟಿ ಮೋರ್ಚಾ ಉಪಾಧ್ಯಕ್ಷ

» ದಾವಣಗೆರೆ

ಜಿಲ್ಲಾ ಬಿಜೆಪಿ ಉಪಾಧ್ಯಕ್ಷ ಹೊಣೆ ನೀಡಿದ್ದ ಪಕ್ಷ, ಇದೀಗ ರಾಜ್ಯ ಎಸ್‌ಟಿ ಮೋರ್ಚಾ ಉಪಾಧ್ಯಕ್ಷರನ್ನಾಗಿ ತಮ್ಮನ್ನು ನೇಮಕ ಮಾಡಿದ್ದು, ರಾಜ್ಯ ಮಟ್ಟದಲ್ಲಿ ಪಕ್ಷ ಸಂಘಟಿಸುವ ಜವಾಬ್ದಾರಿ ಹೊತ್ತು ಪಕ್ಷಕ್ಕಾಗಿ ದುಡಿಯುವುದಾಗಿ ಶ್ರೀನಿವಾಸ ಟಿ. ದಾಸಕರಿಯಪ್ಪ ತಿಳಿಸಿದ್ದಾರೆ. ರಾಜ್ಯ ಬಿಜೆಪಿ ಎಸ್‌ಟಿ ಮೋರ್ಚಾ ನೂತನ ಉಪಾಧ್ಯಕ್ಷರನ್ನಾಗಿ ನೇಮಕ ಮಾಡಿರುವ ಬಗ್ಗೆ ಸಂತಸ ವ್ಯಕ್ತಪಡಿಸಿರುವ ಎಸ್‌ಡಿಕೆ, ಜಿಲ್ಲಾ ಉಪಾಧ್ಯಕ್ಷನಾಗಿ ಪಕ್ಷ ಸಂಘಟಿಸಿರುವುದನ್ನು ಗುರುತಿಸಿ ವರಿಷ್ಠರ ಆದೇಶದ ಮೇರೆಗೆ ರಾಜ್ಯ ಎಸ್‌ಟಿ ಮೋರ್ಚಾ ಉಪಾಧ್ಯಕ್ಷ ಹುದ್ದೆ ನೀಡಲಾಗಿದೆ. ಜವಾಬ್ದಾರಿ ನೀಡಿದ ಪಕ್ಷದ ಎಲ್ಲ ನಾಯಕರಿಗೆ ಧನ್ಯವಾದ ತಿಳಿಸುವುದಾಗಿ ಹೇಳಿದರು. ಎಸ್ ಮೋರ್ಚಾ ರಾಜ್ಯಾಧ್ಯಕ್ಷ ಬಂಗಾರು ಹನುಮಂತು ಆದೇಶದಂತೆ ಶ್ರೀನಿವಾಸ ದಾಸಕರಿಯಪ್ಪ ಅವರನ್ನು ಉಪಾಧ್ಯಕ್ಷರನ್ನಾಗಿ ನೇಮಕ ಮಾಡಿ ಆದೇಶಿಸಲಾಗಿದೆ.

ಸಹಾಯವಾಣಿ ಪ್ರಾರಂಭ

» ಚಿತ್ರದುರ್ಗ

ಜಿಲ್ಲೆಯಲ್ಲಿ ಜನ ಮತ್ತು ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಕಂಡುಬಂದಲ್ಲಿ, ತ್ವರಿತವಾಗಿ ಸ್ಪಂದಿಸುವಂತಾಗಲು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸಹಾಯವಾಣಿ 08194–222538 ಪ್ರಾರಂಭಿಸಲಾಗಿದೆ. ಪ್ರಸಕ್ತ ಸಾಲಿನಲ್ಲಿ ಜಿಲ್ಲೆಯ ಎಲ್ಲ ತಾಲ್ಲೂಕುಗಳನ್ನು ಬರಪೀಡಿತ ತಾಲ್ಲೂಕುಗಳು ಎಂಬುದಾಗಿ ಸರ್ಕಾರ ಘೋಷಿಸಿದ್ದು, ಬರಪೀಡಿತ ತಾಲ್ಲೂಕು ವ್ಯಾಪ್ತಿಯಲ್ಲಿ ಜನ–ಜಾನುವಾರುಗಳಿಗೆ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು ಈಗಾಗಲೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ. ಜಿಲ್ಲೆಯ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಜನ–ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಕಂಡುಬಂದಲ್ಲಿ, ಸಾರ್ವಜನಿಕರು ಚಿತ್ರದುರ್ಗ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿನ ಸಾರ್ವಜನಿಕ ಕುಂದುಕೊರತೆ ಕೋಶದಲ್ಲಿ ಸ್ಥಾಪಿಸಲಾಗಿರುವ ಸಹಾಯವಾಣಿ ಸಂಖ್ಯೆ 08194–222538 ಸಂಖ್ಯೆಗೆ ಕರೆ ಮಾಡಿ.

ತರಬೇತಿ ಕಾರ್ಯಾಗಾರದಲ್ಲಿ ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್

ಗ್ರಾಮ ಸಭೆಗಳಲ್ಲಿ ಆರೋಗ್ಯ ಸಮಸ್ಯೆ ಚರ್ಚಿಸಿ ಪರಿಹರಿಸಿ

» ಚಿತ್ರದುರ್ಗ

ಗ್ರಾಮ ಪಂಚಾಯಿತಿಯ ಗ್ರಾಮ ಸಭೆಗಳಲ್ಲಿ ಆರೋಗ್ಯ ಸಮಸ್ಯೆಗಳ ಬಗ್ಗೆ ಚರ್ಚಿಸಿ ಸೂಕ್ತ ಪರಿಹಾರ ಕಂಡುಕೊಳ್ಳಬಹುದು ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಹೇಳಿದರು.

ಚಿತ್ರದುರ್ಗ ತಾಲೂಕಿನ ಲಕ್ಷ್ಮಿಸಾಗರ–ವಿಜಾಪುರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಎನ್‌ಎಚ್‌ಎಂ ಅಡಿಯಲ್ಲಿ ಗ್ರಾಮ ಆರೋಗ್ಯ ನೈರ್ಮಲ್ಯ ಮತ್ತು ಪೌಷ್ಟಿಕ ಸಮಿತಿ, ವಿಶ್ವಾಸ್ ಆಂದೋಲನ ತರಬೇತಿ ಕಾರ್ಯಗಾರದಲ್ಲಿ ಅವರು ಮಾತನಾಡಿದರು.

ಗ್ರಾಮ ಆರೋಗ್ಯ ನೈರ್ಮಲ್ಯ ಮತ್ತು ಪೌಷ್ಟಿಕ ಸಮಿತಿ ಸದಸ್ಯರುಗಳು ಪ್ರತಿ ತಿಂಗಳು ಆಂದೋಲನದ ರೂಪದಲ್ಲಿ ಒಂದೊಂದು ಆರೋಗ್ಯ ಕಾರ್ಯಕ್ರಮಗಳನ್ನು ಆಯೋಜನೆ ಮಾಡಿಕೊಂಡು ಗ್ರಾಮದ ಜನಪ್ರತಿನಿಧಿಗಳು, ಮುಖಂಡರು, ಸ್ವಯಂಸೇವಕರ ಸಹಕಾರ ಪಡೆದು ವಿಎಚ್‌ಎಸ್‌ಎನ್‌ಸಿ ಸಭೆ ನಡೆಸಬೇಕು ಎಂದು ಹೇಳಿದರು.

ಲಕ್ಷ್ಮೀಸಾಗರ ಗ್ರಾಮ ಪಂಚಾಯಿತಿ ಅಧ್ಯಕ್ಷ ಸರಸ್ವತಿ ಸ್ವಾಮಿ ಮಾತನಾಡಿ, ಗ್ರಾಮಗಳ ಆರೋಗ್ಯ ರಕ್ಷಣೆಗೆ ಗ್ರಾಮ ಪಂಚಾಯಿತಿ ಕೈ ಜೋಡಿಸಲು ಸದಾ ಸಿದ್ಧವಿದೆ. ಗ್ರಾಮಗಳಲ್ಲಿ ಯಾವುದೇ ಸಾಂಕ್ರಾಮಿಕ ರೋಗಗಳು ಹರಡದಂತೆ ವಿಎಚ್‌ಎಸ್‌ಎನ್‌ಸಿ ಸೇರಿದಂತೆ ಗ್ರಾಮ ಪಂಚಾಯಿತಿ ಜನಪ್ರತಿನಿಧಿಗಳಾದ ನಾವುಗಳು ಹೆಚ್ಚು ಗಮನಹರಿಸುತ್ತೇವೆ. ಗ್ರಾಮಗಳಲ್ಲಿ ಆರೋಗ್ಯ ಸೇವೆಗಳಿಗೆ ಆಸ್ಪತ್ರೆ ಅಭಿವೃದ್ಧಿಗೆ ಸಣ್ಣಪುಟ್ಟ ಕಾರ್ಯಗಳಿಗೆ ಗ್ರಾಮ ಪಂಚಾಯಿತಿ ವತಿಯಿಂದ ಸದಾ ಕೈಜೋಡಿಸುತ್ತೇವೆ ಎಂದು ಭರವಸೆ ನೀಡಿದರು.ಒಂದು ಮನೆ ಒಬ್ಬ ವ್ಯಕ್ತಿಯಿಂದ ಸ್ವಚ್ಛತೆ ಕಡೆಗೆ ಆದ್ಯತೆ ನೀಡಿದಲ್ಲಿ ಗ್ರಾಮ ಸ್ವಚ್ಛತೆ ಸಾಧ್ಯ. ಎಲ್ಲವನ್ನೂ ಸರ್ಕಾರದಿಂದ ನಿಭಾಯಿಸಲಾಗದು, ಸರ್ವರೂ ತಮ್ಮ ಆರೋಗ್ಯ ಕಾಪಾಡಿಕೊಳ್ಳಲು ಸ್ವಚ್ಛತೆಗೆ ಹೆಚ್ಚು ಆದ್ಯತೆ ನೀಡಬೇಕು ಎಂದರು.

ಗ್ರಾಮ ಪಂಚಾಯಿತಿ ಸದಸ್ಯರಾದ ಧನಂಜಯ ಮಾತನಾಡಿ, ಮಹಾತ್ಮ ಗಾಂಧೀಜಿಯವರು ಹೇಳಿದಂತೆ ಗ್ರಾಮೋದ್ಧಾರವೇ ದೇಶೋದ್ಧಾರ ಸ್ವಯಂ ಸೇವಕರು, ಗ್ರಾಮದ ಹಿರಿಯರು, ಸೇರಿದಂತೆ ಜನ ಪ್ರತಿನಿಧಿಗಳ ಒಡಗೂಡಿ ಗ್ರಾಮ ಸ್ವಚ್ಛತೆಗೆ ಹೆಚ್ಚು ಆದ್ಯತೆ ನೀಡಬೇಕು. ಸಾಂಕ್ರಾಮಿಕ ರೋಗಗಳು ಹರಡದಂತೆ ನಿಗಾ ವಹಿಸಿದ್ದಲ್ಲಿ ಸಾರ್ವಜನಿಕರ ಆರೋಗ್ಯ ಕಾಪಾಡಬಹುದು. ಅನಾರೋಗ್ಯಕ್ಕೆ ಒಳಗಾಗಿ ಆಸ್ಪತ್ರೆಗೆ ಹಣ ವ್ಯಯ ಮಾಡುವುದಕ್ಕಿಂತ ಉತ್ತಮ ಆರೋಗ್ಯ ಕಾಪಾಡಿಕೊಳ್ಳಲು ಪೌಷ್ಟಿಕ ಅಂಶ ಇರುವ ಶುಚಿ ರುಚಿ ಇರುವ ಆಹಾರ ಸೇವಿಸಿ ನಾವುಗಳು ಆರೋಗ್ಯ ಕಾಪಾಡಿಕೊಳ್ಳಬಹುದು ಎಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿ, ಗ್ರಾಮಗಳಲ್ಲಿ ಘನತ್ಯಾಜ್ಯ ವಸ್ತುಗಳ ವಿಲೇವಾರಿ, ಬಯಲು ಮಲವಿಸರ್ಜನೆಗೆ ಕಡಿವಾಣ ಹಾಕುವುದು, ಶುದ್ಧ ಕುಡಿಯುವ ನೀರನ್ನು ಸಾರ್ವಜನಿಕರು ಬಳಸುವಂತೆ ಆರೋಗ್ಯ ಶಿಕ್ಷಣ ನೀಡುವುದರ ಮುಖಾಂತರ ನಾವು ಜನಾರೋಗ್ಯ ಕಾಪಾಡಿಕೊಳ್ಳಬಹುದು ಎಂದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಉಪಾಧ್ಯಕ್ಷರಾದ ಅನಿತಾ ಸುರೇಶ್, ಗ್ರಾಮ ಪಂಚಾಯಿತಿ ಸದಸ್ಯರಾದ ರೂಪ ನಾಗರಾಜ್, ಪ್ರಯೋಗ ಶಾಲಾ ತಂತ್ರಜ್ಞಾಧಿಕಾರಿ ಸುಪುತ್ರಪ್ಪ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಚಂದ್ರಶೇಖರ್, ಸುನಿಲ್ ಕುಮಾರ್, ಪ್ರವೀಣ್ ಕುಮಾರ್, ಪಿಎಚ್‌ಸಿಓ, ಶಾರದಮ್ಮ ಕವಿತಾ, ಶೋಭಾ, ರಮ್ಯಾ. ವಿಎಚ್‌ಎಸ್‌ಎನ್‌ಸಿ ಸದಸ್ಯರುಗಳು, ಆಶಾ ಕಾರ್ಯಕರ್ತೆಯರು, ಆರೋಗ್ಯ ಇಲಾಖೆ ಇತರ ಸಿಬ್ಬಂದಿ ಜ್ಯೋತೆಮ್ಮ, ಚಂದ್ರಣ್ಣ ಮತ್ತಿತರರು ಹಾಜರಿದ್ದರು.

ಭದ್ರಾ ಬಲದಂಡೆ ನಾಲೆಗೆ ಫೆಬ್ರವರಿ 28 ರ ವರೆಗೆ ನೀರು ಕೊನೆ ಹಂತದ ರೈತರಿಗೆ ನೀರು ತಲುಪಿಸಲು ಬಿಗಿಕ್ರಮ

» ದಾವಣಗೆರೆ

ಈ ವರ್ಷ ತೀವ್ರ ಬರಗಾಲದಿಂದ ಭದ್ರಾ ಜಲಾಶಯದಲ್ಲಿ ನೀರಿನ ಸಂಗ್ರಹ ಕಡಿಮೆಯಾಗಿರುವುದರಿಂದ ಬೇಸಿಗೆ ಹಂಗಾಮಿನಲ್ಲಿ ಅರೆ ನೀರಾವರಿ ಬೆಳೆಗಳಿಗೆ ನೀರು ಹರಿಸಲು ತೀರ್ಮಾನಿಸಿ ಬಲದಂಡೆ ಕಾಲುವೆ ಮೂಲಕ ನೀರು ಹರಿಸಲಾಗುತ್ತಿದ್ದು ಈ ನೀರು ಕೊನೆ ಹಂತದ ರೈತರಿಗೂ ತಲುಪಬೇಕೆಂದು ಉಸ್ತುವಾರಿ ನೋಡಿಕೊಳ್ಳಲು ಅಧಿಕಾರಿಗಳ ತಂಡ ರಚನೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕಂದಾಯ ಇಲಾಖೆ ಅಧಿಕಾರಿಗಳು, ನೀರಾವರಿ ಇಲಾಖೆ ಅಧಿಕಾರಿಗಳು ಹಾಗೂ ಪೊಲೀಸ್ ಇಲಾಖೆ ಅಧಿಕಾರಿಗಳೊಂದಿಗೆ ನಡೆಸಲಾದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಬಲದಂಡೆ ನಾಲೆಗೆ ಈಗಾಗಲೇ ಫೆ.16 ರಿಂದಲೇ ನೀರು ಬಿಡಲಾಗಿದ್ದು ಫೆ.28 ರ ವರೆಗೆ ನೀರು ಹರಿಸಲಾಗುತ್ತದೆ ಎಂದರು.

ಒಟ್ಟು 13 ದಿನಗಳವರೆಗೆ ಕಾಲುವೆಯಲ್ಲಿ ನೀರು ಹರಿಯಲಿದ್ದು ನಂತರ ನಿಲ್ಲಿಸಲಾಗುತ್ತದೆ. ಈ ವೇಳೆ ಕೊನೆಯ ಹಂತದ ರೈತರಿಗೂ ನೀರು ತಲುಪಿಸಬೇಕಾಗಿದೆ. ನೀರಿನ ಸಂಗ್ರಹ ಕಡಿಮೆ ಇರುವ ಕಾರಣ ಅರೆ ನೀರಾವರಿ ಬೆಳೆ ಬೆಳೆಯಲು ಸಲಹೆ ನೀಡಲಾಗಿದೆ. ಇರುವ ತೋಟಗಳನ್ನು ಉಳಿಸಿಕೊಳ್ಳಲು ಮತ್ತು ಕುಡಿಯುವ ನೀರಿನ ಕೊಳವೆಬಾವಿಗಳ ಅಂತರ್ಜಲ ಕಡಿಮೆಯಾಗದಂತೆ ನೋಡಿಕೊಳ್ಳುವುದು ನಮ್ಮ ಆದ್ಯತೆಯಾಗಿದೆ ಎಂದು ತಿಳಿಸಿದರು.

ಬಲದಂಡೆಗೆ ಕೆಲವು ರೈತರು ಅನಧಿಕೃತವಾಗಿ ಪಂಪ್ ಅಳವಡಿಕೆ ಮಾಡಿಕೊಂಡು ನೀರೆತ್ತಲಾಗುತ್ತಿದೆ. ಇದರಿಂದ ಕೊನೆ ಭಾಗದ ರೈತರಿಗೆ ನೀರು ತಲುಪುತ್ತಿಲ್ಲ. ನೀರಾವರಿ ಇಲಾಖೆಗೆ ಸೇರಿರುವ ಜಾಗದಲ್ಲಿ ಅಂದರೆ ಭೂಸ್ವಾಧೀನವಾದ ಜಾಗದಲ್ಲಿಯೇ ಕೊಳವೆಬಾವಿ ಕೊರೆಯಿಸಿ ಟಿ.ಸಿ.ಗಳನ್ನು ಅಳವಡಿಸಿ ನೀರೆತ್ತಲಾಗುತ್ತಿದೆ ಎಂದರು.

ನಿಯಮಾನುಸಾರ ಕ್ರಮ ಕೈಗೊಂಡು ಅನಧಿಕೃತವಾಗಿದ್ದಲ್ಲಿ ತೆರವಿಗೆ ಕಟ್ಟುನಿಟ್ಟಿನ ಕ್ರಮ ಜರುಗಿಸಲಾಗುತ್ತದೆ. ಇದಕ್ಕಾಗಿ ಕಂದಾಯ ಇಲಾಖೆ ಅಧಿಕಾರಿಗಳು, ಪೊಲೀಸ್ ಇಲಾಖೆ ಅಧಿಕಾರಿಗಳು, ನೀರಾವರಿ ಇಲಾಖೆ ಅಧಿಕಾರಿಗಳನ್ನೊಳಗೊಂಡು ದಾವಣಗೆರೆ, ಹರಿಹರ, ಚನ್ನಗಿರಿ ತಾಲ್ಲೂಕುಗಳಿಗೆ ಮೂರು ತಂಡಗಳನ್ನು ರಚನೆ ಮಾಡಲಾಗಿದೆ. ಈ ತಂಡಗಳು ಎಲ್ಲೆಲ್ಲಿ ನಾಲೆಗೆ ಅನಧಿಕೃತವಾಗಿ ಪಂಪ್ ಅಳವಡಿಕೆ ಮಾಡಿದ್ದಾರೆ, ಅದನ್ನು ತೆರವು ಮಾಡುವರು ಮತ್ತು ರೈತರೇ ತೆರವು ಮಾಡದಿದ್ದಲ್ಲಿ ಪರಿಕರಗಳನ್ನು ಸರ್ಕಾರದ ವಶಕ್ಕೆ ಪಡೆದು ಮುಟ್ಟುಗೋಲು ಹಾಕಿಕೊಳ್ಳಲಾಗುತ್ತದೆ ಎಂದು ಹೇಳಿದರು.

ನಾಲೆಗೆ ನೀರು ಬಿಡಲಾಗಿದ್ದು ಅದರಲ್ಲಿ 10 ಅಡಿ ಮಾತ್ರ ನೀರು ಬರುತ್ತಿದೆ. ಇದು 13 ಅಡಿವರೆಗೆ ಏರಿಕೆಯಾದಲ್ಲಿ ಮಾತ್ರ ಕೊನೆ ಭಾಗದ ರೈತರಿಗೆ ತಲುಪಲು ಸಾಧ್ಯವಿದ್ದು ಅಗತ್ಯವಿದ್ದಲ್ಲಿ 144 ಸೆಕ್ಷನ್ ಜಾರಿಗೊಳಿಸಲಾಗುತ್ತದೆ. ಬೆಸ್ಕಾಂ ವಿಜಿಲೆನ್ಸ್ ತಂಡದವರು ಅನಧಿಕೃತವಾಗಿ ವಿದ್ಯುತ್ ಸಂಪರ್ಕ ಪಡೆದಿದ್ದಲ್ಲಿ ಕಡಿತಗೊಳಿಸಲು ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಇಟ್ನಾಳ್ ಮಾತನಾಡಿ, ಶಾಂತಿ ಸಾಗರದಲ್ಲಿ ಜಿಲ್ಲೆಯ ಚನ್ನಗಿರಿ, ಬಹುಗ್ರಾಮಗಳು ಸೇರಿದಂತೆ ಚಿತ್ರದುರ್ಗ ಜಿಲ್ಲೆಗೆ ನೀರು ಪೂರೈಸಲಾಗುತ್ತದೆ. ಆದರೆ ಶಾಂತಿಸಾಗರದಲ್ಲಿ ನೀರಿನ ಸಂಗ್ರಹ ಕಡಿಮೆ ಇದೆ. ನಾಲೆಯಿಂದ ನೀರು ಬಿಡುಗಡೆ ಮಾಡಿದಲ್ಲಿ ಬೇಸಿಗೆಗೆ ನೀರು ಪೂರೈಸಲು ಸಾಧ್ಯವಾಗಲಿದೆ. ಮತ್ತು ರಾಜನಹಳ್ಳಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗೆ ನಿರಂತರ ವಿದ್ಯುತ್ ಪೂರೈಕೆ ಮಾಡಬೇಕೆಂದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸೈಯ್ಯದಾ ಆಫ್ರಿನ್ ಭಾನು ಎಸ್.ಬಳ್ಳಾರಿ, ಬಿ.ಆರ್.ಪ್ರಾಜೆಕ್ಟ್ ಅಧೀಕ್ಷಕ ಇಂಜಿನಿಯರ್ ಸುಜಾತ, ಉಪವಿಭಾಗಾಧಿಕಾರಿ ದುರ್ಗಶ್ರೀ, ಭದ್ರಾ ನಾಲಾ.ನಂ.5 ವಿಭಾಗದ ಕಾರ್ಯಪಾಲಕ ಇಂಜಿನಿಯರ್ ಮಂಜುನಾಥ್ ಆರ್.ಬಿ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಚಿತ್ರದುರ್ಗ: ಫೆ.20ರಂದು ಕವಿ ಸರ್ವಜ್ಞ ಜಯಂತಿ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ, ಕುಂಬಾರ ಗುಂಡಯ್ಯ ಮಹಾಸಂಸ್ಥಾನ, ಚಿತ್ರದುರ್ಗ ಜಿಲ್ಲಾ ಕುಂಬಾರ ಕ್ಷೇಮಾಭಿವೃದ್ಧಿ ಸಂಘ, ಕರ್ನಾಟಕ ಕುಂಬಾರ ಮಹಿಳಾ ಮಹಾಸಭಾ ಇವರ ಸಂಯುಕ್ತಾಶ್ರಯದಲ್ಲಿ ಕವಿ ಸರ್ವಜ್ಞ ಜಯಂತಿ ಆಚರಣೆ ಸಮಾರಂಭವನ್ನು ಇದೇ ಫೆ.20 ರಂದು ಮಧ್ಯಾಹ್ನ 12 ಗಂಟೆಗೆ ನಗರದ ತ.ರಾ.ಸು ರಂಗಮಂದಿರದಲ್ಲಿ ಆಯೋಜಿಸಲಾಗಿದೆ. ಕುಂಬಾರ ಗುರುಪೀಠದ ಶ್ರೀ ಬಸವಮೂರ್ತಿ ಕುಂಬಾರ ಗುಂಡಯ್ಯ ಸ್ವಾಮೀಜಿ ದಿವ್ಯ ಸಾನಿಧ್ಯವಹಿಸುವರು. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಸಚಿವರು ಹಾಗೂ ಸಂಸದ ಎ.ನಾರಾಯಣಸ್ವಾಮಿ ಘನ ಉಪಸ್ಥಿತಿ ವಹಿಸುವರು. ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಕಾರ್ಯಕ್ರಮ ಉದ್ಘಾಟಿಸುವರು.

ಮಹಿಳೆಯರಿಗೆ ಸ್ವಾವಲಂಬಿ ಬದುಕು ರೂಪಿಸುವ ಕಾರ್ಯ ನಿರಂತರ

» ಚಳ್ಳಕೆರೆ

ಕಳೆದ ಹಲವಾರು ದಶಕಗಳಿಂದ ರಾಜ್ಯದಲ್ಲಿ ಮಹಿಳೆಯರಿಗೆ ಆರ್ಥಿಕ ಶಕ್

ಫಾಸ್ಟ್ ನ್ಯೂಸ್

ಎಲ್ಲಾ ಇಲಾಖೆಗಳು ಸಮಸನ್ವಯತೆಯಿಂದ ಕೆಲಸ ಮಾಡಿದಲ್ಲಿ ಮಕ್ಕಳ ಹಕ್ಕುಗಳ ರಕ್ಷಣೆ ಸಾಧ್ಯ

» ದಾವಣಗೆರೆ

ಪೋಕ್ಸೋ ಕಾಯಿದೆ, ಬಾಲ್ಯವಿವಾಹ ಮತ್ತು ಬಾಲನ್ಯಾಯವನ್ನು ಒದಗಿಸಲು ಶಿಕ್ಷಣ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪೊಲೀಸ್ ಇಲಾಖೆಗಳು ಸಮನ್ವಯತೆಯಿಂದ ಕೆಲಸ ಮಾಡಿದಲ್ಲಿ ಮಕ್ಕಳ ಹಕ್ಕುಗಳ ರಕ್ಷಣೆ ಮಾಡುವ ಮಕ್ಕಳ ಮೇಲಾಗುವ ಘಟನೆಗಳನ್ನು ತಡೆಯಲು ಸಾಧ್ಯವಾಗುತ್ತದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್. ಹೆಗಡೆ ತಿಳಿಸಿದರು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಪೊಲೀಸ್ ಇಲಾಖೆ ,ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ವಿವಿಧ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ಶನಿವರ ತುಂಗಭದ್ರಾ ಸಭಾಂಗಣದಲ್ಲಿ ಏರ್ಪಡಿಸಲಾದ ಪೊ□ಕ್ಸ್ ಕಾನೂನು, ಬಾಲ್ಯ ವಿವಾಹ ತಡೆ ಕಾಯ್ದೆ ಮತ್ತು ಬಾಲನ್ಯಾಯ ವಿಷಯಗಳ ಕುರಿತು ವಿವಿಧ ಇಲಾಖೆಗಳ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಏರ್ಪಡಿಸಿದ ಕಾರ್ಯಗಾರ ಉದ್ಘಾಟಿಸಿ ಮಾತನಾಡಿದರು. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಮಾಹವೀರ. ಮ.ಕರೆಣ್ಣ, ಹಿರಿಯ ಸಿವಿಲ್ ನ್ಯಾಯಾಧೀಶರಾದ ರೇಷಾ□□ ಎಚ್ ಕೆ, ಪೊಲೀಸ್ ವರಿಷಾ□□ಧಿಕಾರಿ ಉಮಾ ಪ್ರಶಾಂತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು ವಾಸಂತಿ ಉಪ್ಪಾರ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಕರವೆ ಯುವ ಘಟಕದ ಅಧ್ಯಕ್ಷ ಅಣ್ಣಪ್ಪ ಕರುನಾಡ ವಿಜಯಸೇನೆಗೆ ಸೇರ್ಪಡೆ

» ಚಿತ್ರದುರ್ಗ

ಕರ್ನಾಟಕ ರಕ್ಷಣಾ ವೇದಿಕೆ ಯುವ ಘಟಕದ ಅಧ್ಯಕ್ಷ ಅಣ್ಣಪ್ಪ ಹಾಗೂ ಇತರೆ ಹತ್ತು ಮಂದಿ ಕರುನಾಡ ವಿಜಯಸೇನೆಗೆ ಸೇರ್ಪಡೆಗೊಂಡರು.ಪ್ರವಾಸಿ ಮಂದಿರದಲ್ಲಿ ಅಣ್ಣಪ್ಪ ಮತ್ತಿತರರನ್ನು ಬರ ಮಾಡಿಕೊಂಡು ಮಾತನಾಡಿದ ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ದೀಪಕ್‌ರವರ ಸಾರಥ್ಯದಲ್ಲಿ ಮುನ್ನಡೆಯುತ್ತಿರುವ ಕರುನಾಡ ವಿಜಯಸೇನೆ ಕನ್ನಡ ನಾಡು, ನುಡಿ, ನೆಲ, ಜಲ, ಭಾಷೆಯ ಉಳಿವಿಗಾಗಿ ಹೋರಾಟ ಮಾಡಿಕೊಂಡು ಬರುತ್ತಿದೆ. ಕಳೆದ ಎರಡು ವರ್ಷಗಳಿಂದ ಚಿತ್ರದುರ್ಗದಲ್ಲಿ ಕರುನಾಡ ವಿಜಯಸೇನೆಯಿಂದ ನಿರಂತರ ಹೋರಾಟ ನಡೆಯುತ್ತಿದೆ. ಮಧ್ಯಕರ್ನಾಟಕದ ಬಯಲುಸೀಮೆ ಚಿತ್ರದುರ್ಗಕ್ಕೆ ಭದ್ರಾಮೇಲ್ದಂಡೆ ಯೋಜನೆ, ಮೆಡಿಕಲ್ ಕಾಲೇಜು ಹಾಗೂ ಕವಾಡಿಗರಹಟ್ಟಿಯಲ್ಲಿ ಕಲುಷಿತ ನೀರು ಸೇವಿಸಿ ಆರು ಮಂದಿ ಮೃತಪಟ್ಟು ಇನ್ನೂರಕ್ಕೂ ಹೆಚ್ಚು ಮಂದಿ ಅಸ್ವಸ್ಥರಾದಾಗ ನೊಂದ ಕುಟುಂಬಗಳಿಗೆ ಸರ್ಕಾರ ಪರಿಹಾರ ನೀಡಲೆಂದು ಅವಿರತವಾಗಿ ಹೋರಾಡಿದ್ದೇನೆ ಎಂದು ಹೇಳಿದರು.ಕರುನಾಡ ವಿಜಯಸೇನೆ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ವೀಣಗೌರಣ್ಣ ಹಾಗೂ ಪದಾಧಿಕಾರಿಗಳು ಈ ಸಂದರ್ಭದಲ್ಲಿದ್ದರು.

14 ವಾರ್ಡ್‌ನಲ್ಲಿ ಕೊಳವೆಬಾವಿ ಉದ್ಘಾಟಿಸಿದ ಮಂಜುನಾಥ್‌ಗೊಪ್ಪೆ

» ಚಿತ್ರದುರ್ಗ

ನಗರಸಭೆ ವಾರ್ಡ್ ನಂ. 14 ರಲ್ಲಿ ನಗರಸಭೆ ಸದಸ್ಯ ಮಂಜುನಾಥ್‌ಗೊಪ್ಪೆ ಕೊಳವೆ ಬಾವಿ ಮತ್ತು ಸಿ.ಸಿ.ರಸ್ತೆಯನ್ನು ಉದ್ಘಾಟಿಸಿದರು. 27 ಲಕ್ಷ ರೂ. ಸಿ.ಸಿ. ರಸ್ತೆಗೆ, ಕೊಳವೆ ಬಾವಿಗೆ ಐದು ಲಕ್ಷ ರೂ.ಗಳನ್ನು ಖರ್ಚು ಮಾಡಲಾಗಿದೆ. ಬೇಸಿಗೆ ಆರಂಭವಾಗಿದೆ. ಈ ಭಾಗದ ಜನರಿಗೆ ಕೊಳವೆಬಾವಿ ಕೊರಸಿರುವುದರಿಂದ ನೀರನ್ನು ಪೋಲು ಮಾಡದೆ ಮಿತವಾಗಿ ಬಳಸುವಂತೆ ತಿಳಿಸಿದರು.

ಈವರೆಗೂ ಒಬ್ಬ ನಿರುದ್ಯೋಗಿಗೂ 1 ರೂ. ಕೊಟ್ಟಿಲ್ಲ: ಮಾಜಿ ಡಿಸಿಎಂ ಈಶ್ವರಪ್ಪ

ಸಿಎಂ ಸಿದ್ದರಾಮಯ್ಯಗೆ ನೋಬೆಲ್ ನೀಡಲಿ

» ಚಿತ್ರದುರ್ಗ

ಸುಳ್ಳು ಹೇಳುವುದರಲ್ಲಿ ಹೆಗ್ಗಳಿಕೆ ಪಡೆದಿರುವ ಸಿಎಂ ಸಿದ್ದರಾಮಯ್ಯ ಹಾಗೂ ರಾಹುಲ್ ಗಾಂಧಿ ಅವರಿಗೆ ನೋಬೆಲ್ ಪ್ರಶಸ್ತಿ ಕೊಡಬೇಕು ಎಂದು ಮಾಜಿ ಸಚಿವ ಕೆ.ಎಸ್.ಈಶ್ವರಪ್ಪ ಕುಟುಕಿದರು.

ನಗರದಲ್ಲಿ ಸೋಮವಾರ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಸಿಎಂ ನುಡಿದಂತೆ ನಡೆದಿದ್ದೇವೆ ಎಂದು ಹೇಳುತ್ತಾರೆ ಆದರೆ ಈವರೆಗೂ ಒಬ್ಬ ನಿರುದ್ಯೋಗಿಗೂ 1 ರೂ. ಕೊಟ್ಟಿಲ್ಲ. ವಿದ್ಯುತ್ ಇಲ್ಲ, ಅನೇಕ ಭಾರೀ ದರ ಹೆಚ್ಚಿಸಿದ್ದಾರೆ. ಪಾಪರ್ ಆಗಿದ್ದೇವೆ ಎಂದು ಹೇಳಲೂ ಮುಖ್ಯಮಂತ್ರಿ ಹಾಗೂ ಉಪ ಮುಖ್ಯಮಂತ್ರಿ ಒಂದಾಗಲ್ಲ. ಇವರುಗಳ ರೀತಿಯೇ ರಾಹುಲ್ ಗಾಂಧಿ ಇದ್ದು, ರಾಮಮಂದಿರಕ್ಕೆ ಪರಿಶಿಷ್ಟರನ್ನು ಕರೆದಿಲ್ಲ ಎಂದು ಸುಳ್ಳು ಹೇಳಿದ್ದಾರೆ. ಮಾದಾರ ಚನ್ನಯ್ಯಶ್ರೀ, ಕಾಗಿನೆಲೆ ಶ್ರೀ ಸೇರಿ ಅನೇಕರು ಅಯೋಧ್ಯೆಗೆ ಹೋಗಿದ್ದು, ಕಾರ್ಯಕ್ರಮದ ಬಗ್ಗೆ ಶ್ರೀಗಳು ಆನಂದ ಪಟ್ಟಿದ್ದಾರೆ ಎಂದರು.

ಆರ್‌ಎಸ್‌ಎಸ್‌ನಲ್ಲಿ ಈಶ್ವರಪ್ಪಗೆ ಹೊಡಿ, ಬಡಿ , ಕಡಿ ಟ್ರೇನಿಂಗ್ ಆಗಿದೆ ಎಂಬ ಸಿದ್ದರಾಮಯ್ಯ ಹೇಳಿಕೆ ವಿಚಾರವಾಗಿ ಪ್ರತಿಕ್ರಿಯೆ ನೀಡಿದ ಈಶ್ವರಪ್ಪ, ಹೊಡಿ, ಬಡಿ, ಕಡಿ ಎಂದು ನಾನು ಹೇಳಿಲ್ಲ. ದೇಶ ವಿಭಜನೆ ಬಗ್ಗೆ ಮಾತನಾಡಿದ್ದರ ಬಗ್ಗೆ ಹೇಳಿದ್ದೇನೆ. ಭಾರತ ಮಾತೆ ತುಂಡು ಮಾಡುವ ವ್ಯಕ್ತಿಗೆ ಗುಂಡಿಕ್ಕುವ ಕಾನೂನು ತರಬೇಕೆಂದು ಹೇಳಿದ್ದೆನು ಎಂದ ಅವರು, ನನಗೆ ಆರ್‌ಎಸ್‌ಎಸ್‌ನಲ್ಲಿ ಟ್ರೇನಿಂಗ್ ಆಗಿದೆ. ಆದರೆ ಸಿದ್ದರಾಮಯ್ಯ ಅವರಿಗೆ ಟ್ರೇನಿಂಗ್ ಆಗದಿರುವುದೇ ಸಮಸ್ಯೆ. ಸಿದ್ದರಾಮಯ್ಯ ಒಂದು ದಿನ ಆರ್‌ಎಸ್‌ಎಸ್ ಟ್ರೇನಿಂಗ್ ಗೆ ಬರಲಿ, ಆರ್‌ಎಸ್‌ಎಸ್‌ನಲ್ಲಿ ಏನು ಹೇಳಿಕೊಡುತ್ತಾರೆ ಎಂಬುದು ಗೊತ್ತಾಗುತ್ತದೆ ಎಂದು ಹೇಳಿದರು.

ರಾಮಮಂದಿರ ಬೇರೆ ಸ್ಥಳದಲ್ಲಿ ನಿರ್ಮಾಣ, ಅವ್ಯವಹಾರ ಆರೋಪ ವಿಚಾರವಾಗಿ ಮಾತನಾಡಿದ ಅವರು, ಸಚಿವ ಸಂತೋಷ್ ಲಾಡ್‌ಗೆ ಏನೂ ಗೊತ್ತಿಲ್ಲ. ಅಜ್ಞಾನದಿಂದ ಸಚಿವ ಸಂತೋಷ್ ಲಾಡ್ ಈ ರೀತಿ ಮಾತಾನಾಡುತ್ತಿದ್ದಾರೆ. ರಾಮಮಂದಿರ ದೇಶ ಒಂದಾಗಿಸಲು ಕಟ್ಟಿದ ಮಂದಿರ. ಅಯೋಧ್ಯೆಯಲ್ಲಿ 700ಕ್ಕೂ ಹೆಚ್ಚು ಹೋಟೆಲ್ ನಿರ್ಮಾಣ ಆಗಲಿದ್ದು, ಅನೇಕರಿಗೆ ಉದ್ಯೋಗ ಅವಕಾಶ ಲಭಿಸಲಿದೆ. ಅಲ್ಲದೆ ರಾಮನೇ ಕಾಲ್ಪನಿಕ ಎಂದಿರುವ ಪಕ್ಷ ಕಾಂಗ್ರೆಸ್. ಹಾಗಾಗಿ ರಾಮಮಂದಿರ ಬಗ್ಗೆ ಮಾತಾಡುವ ಯೋಗ್ಯತೆ ಸಂತೋಷ್ ಲಾಡ್‌ಗೆ ಇಲ್ಲ ಎಂದು ಲೇವಡಿ ಮಾಡಿದರು. ರಾಮಮಂದಿರ ನಿರ್ಮಾಣದಿಂದ ದೇಶದ ಜನರ ಒಗ್ಗೂಡಿಕೆ ಆಗಲಿದೆ. ಇದರಿಂದ ಲೋಕಸಭೆ ಚುನಾವಣೆಯಲ್ಲಿ ಬಿಜೆಪಿಗೆ ಹೆಚ್ಚಿನ ಲಾಭ ಆಗಲಿದೆ. ಎನ್‌ಡಿಎ 400ಕ್ಕೂ ಹೆಚ್ಚು ಸ್ಥಾನ ಗೆಲ್ಲುವ ವಿಶ್ವಾಸ ಇದೆ ಎಂದ ಅವರು, ಒಂದು ಕಡೆ ಮೋದಿ ಆಡಳಿತ, ಮತ್ತೊಂದು ಕಡೆ ರಾಮ ಇರುವುದರಿಂದ ಲೋಕಸಭೆ ಚುನಾವಣೆಯಲ್ಲಿ ಬಿಜೆಪಿಗೆ ಲಾಭ ಆಗಲಿದೆ ಎಂದು ಹೇಳಿದರು. ಮಾದಾರ ಚನ್ನಯ್ಯಶ್ರೀ ಲೋಕಸಭೆಗೆ ಅಭ್ಯರ್ಥಿ ವಿಚಾರವಾಗಿ ಮಾತನಾಡಿದ ಅವರು, ರಾಜ್ಯಮಟ್ಟದಲ್ಲಿ ನಮಗೆ ಯಾವುದೇ ಮಾಹಿತಿ ಇಲ್ಲ. ಹೈಕಮಾಂಡ್ ಮಟ್ಟದಲ್ಲಿ ಏನು ಚಿಂತನೆ ನಡೆದಿದೆ ಎಂಬುದರ ಬಗ್ಗೆ ನನಗೆ ಮಾಹಿತಿ ಇಲ್ಲ. ಮಾದಾರ ಚನ್ನಯ್ಯಶ್ರೀ ಬಂದರೆ ನಾನು ಖುಷಿ ಪಡುತ್ತೇನೆ ಎಂದರು.

ಕೇಂದ್ರದಿಂದ ರಾಜ್ಯಕ್ಕೆ ಟ್ಯಾಕ್ಸ್ ಅನುದಾನದ ವಿಚಾರವಾಗಿ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮ್ ಈಗಾಗಲೇ ಸ್ಪಷ್ಟಪಡಿಸಿದ್ದಾರೆ. ಅಲ್ಲದೆ ಕೇಂದ್ರ ಸರ್ಕಾರ ಶ್ವೇತ ಪತ್ರ ಹೊರಡಿಸಿದೆ. ಅದೇ ರೀತಿ ರಾಜ್ಯ ಸರ್ಕಾರವೂ ಶ್ವೇತ ಪತ್ರ ಹೊರಡಿಸಲಿ ಎಂದು ಆಗ್ರಹಿಸಿದರು.

ಮಾಜಿ ಶಾಸಕ ಜಿಎಚ್.ತಿಪ್ಪಾರೆಡ್ಡಿ, ಬಿಜೆಪಿ ಪ್ರಧಾನ ಕಾರ್ಯದರ್ಶಿ ಸುರೇಶ್ ಸಿದ್ದಾಪುರ, ಸಂಪತ್ ಕುಮಾರ್ ಉಪಸ್ಥಿತರಿದ್ದರು.

ನಾಯಕನಹಟ್ಟಿ ಸರ್ಕಾರಿ ಉರ್ದು ಪ್ರಾಥಮಿಕ ಶಾಲೆ ಮೂಲಬೂತ ಸೌಲಭ್ಯಗಳಿಂದ ವಂಚಿತ

» ಹರೀಶ್ ತಿಮ್ಮಪ್ಪಯ್ಯನಹಳ್ಳಿ

ನಾಯಕನಹಟ್ಟಿ: ಸರ್ಕಾರಿ ಉರ್ದು ಶಾಲೆಯಲ್ಲಿ 1930ನೇ ಇಸವಿಯಲ್ಲಿ ನಾಯಕನಹಟ್ಟಿ ಪಟ್ಟಣದಲ್ಲಿ ಸ್ಥಾಪನೆಯಾಗಿರುವುದು ತುಂಬಾ ಸಂತೋಷದ ಸಂಗತಿ, ಆದರೆ ದುಖಃದ ಸಂಗಿತಿ ಕೂಡ ಇದೆ. ನಮ್ಮ ಸರ್ಕಾರದ ಮಂಜೂರಾದ ಶಾಲೆಯು ಇತಿಹಾಸ ಪುಟಗಳಲ್ಲಿ ಒಂದು ಇದಾಗಿದೆ. 1930ರಲ್ಲಿ ನಾಯಕನಹಟ್ಟಿಯಲ್ಲಿ ಪ್ರಾರಂಭವಾಗಿ ಮಸೀದಿ ಹತ್ತಿರ ಬಾಡಿಗೆ ಮನೆಯಲ್ಲಿ ಶಾಲೆ ನಡೆಸುತ್ತಾ ಬಂದಿದ್ದಾರೆ. ಸುಮಾರು ಇಲ್ಲಿಗೆ ಈ ಉರ್ದು ಶಾಲೆ 94 ವರ್ಷಗಳ ಕಾಲ ನಿರಂತರವಾಗಿ ಮುಂದುವರೆಸಿಕೊಂಡು ಬಂದಿದೆ. ಬಾಡಿಗೆ ಮನೆಯಲ್ಲಿ ಸರ್ಕಾರದಿಂದ ಬಾಡಿಗೆ ಕಟ್ಟಿ ಅದು ಎಷ್ಟೋ ವಿದ್ಯಾರ್ಥಿಗಳು ಶಿಕ್ಷಕರು ಉನ್ನತ ಹುದ್ದೆಯನ್ನು ಮತ್ತು ಪದವಿಯನ್ನು ತೆಗೆದುಕೊಂಡಿರುವ ಶಾಲೆ ಇದು ಆಗಿರುತ್ತದೆ. ಇದು ಅಲ್ಲದೆ 1999ರಲ್ಲಿ ಮುಸ್ಲಿಂ ಸಮುದಾಯದ ಮುಖಂಡರಾದ ಟೀಪುಸಾಬ್‌ರವರು ಶಾಲೆಯನ್ನು ಶಾದಿಮಹಲ್ ಜಾಗದಲ್ಲಿ ಪುನಃ ಪ್ರಾರಂಭಿಸಿದರು. 1999ರಲ್ಲಿ ಈ ಸ್ಥಳಕ್ಕೆ ಬಂದು 1 ರಿಂದ 7ನೇ ತರಗತಿಯವರೆಗೂ ಶಾಲೆ ನಡೆಸುತ್ತಾ ಬಂದಿದ್ದಾರೆ. ಒಂದು ದುಖಃದ ಸಂಗತಿ ಎಂದರೆ ಇಲ್ಲಿನ ಮಕ್ಕಳಿಗೆ ಆಟದ ಮೈದಾನ ಇಲ್ಲ, ಹೆಣ್ಣು ಮಕ್ಕಳಿಗೆ ಶೌಚಾಲಯ ವ್ಯವಸ್ಥೆ ಬಿಟ್ಟರೆ ಗಂಡು ಮಕ್ಕಳಿಗೆ ಶೌಚಾಲಯದ ವ್ಯವಸ್ಥೆ ಇಲ್ಲ. ಈ ಶಾಲೆ ಕೊಠಡಿಗಳಿಗೆ ಸುಣ್ಣ–ಬಣ್ಣದ ವ್ಯವಸ್ಥೆ ಇಲ್ಲ, ಮೇಲ್ಛಾವಣೆ ಹಾಳಾಗಿದೆ, ಮಳೆ ಬಂದರೆ ನೀರು ಕೊಠಡಿಯ ಒಳಗೆ ಇರುತ್ತದೆ. ಮಕ್ಕಳು ನೆಲದ ಮೇಲೆ ಕೂತು ಓದಬೇಕು. ಪಿಠೋಪಕರಣದ ವ್ಯವಸ್ಥೆ ಇರುವುದಿಲ್ಲ. ಒಟ್ಟಾರೆ ಹೇಳಬೇಕಾದರೆ ಮೂಲ ಸೌಕಾರ್ಯದಿಂದ ವಂಚಿತವಾಗಿದೆ. ಇಲ್ಲಿಯವರೆಗೂ ಯಾವ ಅಧಿಕಾರಿಗಳು ಈ ಶಾಲೆಗೆ ಬೇಟಿ ಮಾಡಿಲ್ಲ, ಮಾಡಿದ್ದರು ನೋಡಿಕೊಂಡು ಹೋಗಿರುವವರೆ? ಎಂಬುವುದು ದುಖಃದ ಸಂಗತಿ. ರಾಜಕಾರಣೀಗಳನ್ನು ದೂರುವುದು ಸರಿಯಲ್ಲ, ಏಕೆಂದರೆ ಅವರ ಗಮನಕ್ಕೆ ನಾವು ತಂದಿದ್ದರೆ ಆ ವ್ಯವಸ್ಥೆ ಸರಿಪಡಿಸುತ್ತಿದ್ದರು. ನಮ್ಮ ಜಿಲ್ಲೆಯ ಜಿಲ್ಲಾಧಿಕಾರಿಗಳು, ಡಿಡಿಪಿಐ, ಕ್ಷೇತ್ರ ಶಿಕ್ಷಣಾಧಿಕಾರಿಗಳು, ತಹಶೀಲ್ದಾರ್‌ರವರು ಈ ಶಾಲೆಗೆ ಬೇಟಿ ನೀಡಿ ಇಲ್ಲಿನ ಕುಂದುಕೊರತೆಯನ್ನು ನೋಡಿ ಈ ಶಾಲೆಗೆ ಬೇರೆಕಡೆ 2 ರಿಂದ 3 ಎಕರೆ ಜಮೀನು ನೀಡಬೇಕು.

ಉರ್ದು ಶಾಲೆ ಮಕ್ಕಳಿಗೆ ಏನಾದರು ತೊಂದರೆಯಾದರೆ ಜಿಲ್ಲಾಧಿಕಾರಿಗಳು ಶಿಕ್ಷಣ ಇಲಾಖೆ ಪಟ್ಟಣ ಪಂಚಾಯಿತಿ ತಹಶೀಲ್ದಾರ್ ರೆಹಮನ್ ಪಾಷ ಹೊಣೆಯಾಗಿರುತ್ತಿರ ಎಂದು ಹೆಸರು ಹೇಳದ ಗ್ರಾಮಸ್ಥ ದೂರಿದರು.

ಪಟ್ಟಣದ 7ನೇ ವಾರ್ಡಿನ ಗ್ರಾಮಸ್ಥ ಸೈಯಸ್ ಕೌಸರ್ ಬಾಷಾ ಮಾತನಾಡಿ ಈ ಶಾಲೆಗೆ ಬರುವ ಮಕ್ಕಳು ಸ್ಲಂನಲ್ಲಿ ವಾಸಮಾಡುವ ಮಕ್ಕಳು ಆಗಿರುತ್ತಾರೆ. ಸ್ವಾಮಿ ನಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿ, ಸರ್ಕಾರಿ ಉರ್ದು ಶಾಲೆಗಳನ್ನು ಉನ್ನತ ಶಾಲೆಗಳನ್ನಾಗಿ ಮಾಡಿ. ಮೇಲ್ದರ್ಜೆಗೆ ಏರಿಸಿ, ಮಕ್ಕಳ ಕಲಿಕೆಗೆ ಆಟ ಪ್ರವಚನಗಳು ಉತ್ತಮವಾಗಿ ನಡೆಯುತ್ತವೆ, ಸರ್ಕಾರಿ ಶಾಲೆಗಳನ್ನು ಕಡೆಗಣಿಡಬೇಡಿ. ನಮ್ಮ ಕ್ಷೇತ್ರದ ಶಾಸಕರಾದ ಎನ್.ವೈ.ಗೋಪಾಲಕೃಷ್ಣ ಸರ್ ರವರು ಒಂದು ಬಾರಿ ನಮ್ಮ ಶಾಲೆಗೆ ದಯವಿಟ್ಟು ಬರಬೇಕು, ನಮ್ಮ ಮಕ್ಕಳ ಪರಿಸ್ಥಿತಿಯನ್ನು ನೋಡಬೇಕು. ಅವರಿಗೆ ನಮ್ಮ ಮೇಲೆ ತುಂಬಾ ಪ್ರೀತಿ ಇದೆ. ಈ ಶಾಲೆಯನ್ನು ಎನ್.ವೈ.ಗೋಪಾಲಕೃಷ್ಣ ರವರು ಬದಲಾವಣೆ ಮಾಡುತ್ತಾರೆ ಎಂಬುವುದು ನಮ್ಮ ಕನಸು ನನಸು ಮಾಡುತ್ತಾರೆ ಎಂದು ತಿಳಿಸಿದರು.

ನಾಯಕನಹಟ್ಟಿ ಪಟ್ಟಣದ ಸರ್ಕಾರಿ ಉರ್ದು ಶಾಲೆಯ ಮುಖ್ಯಶಿಕ್ಷಕರಾದ ಸೈಯದ್ ವಾಯಿದ್ ಬಾಷಾ ಮಾತನಾಡಿ 88 ವಿದ್ಯಾರ್ಥಿಗಳಿದ್ದು, ಅದರಲ್ಲಿ 36 ಗಂಡು, 52 ಹೆಣ್ಣು ಮಕ್ಕಳು ಇದ್ದಾರೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಉಪಸ್ಥಿತರಾದ ಸೈಯದ್ ವಾಯಿದ್ ಬಾಷಾ, ಇಂದ್ರಾಯಣಿ, ಮಹಮದ್ ಸಮಿಉಲ್ಲ, ಶಿಕ್ಷಕ, ಶಿಕ್ಷಕಿಯರು ಇದ್ದರು.

ಚುನಾವಣೆ ಯಶಸ್ವಿಯಾಗಿ ನಿರ್ವಹಿಸಲು ತರಬೇತಿ ಶಿಬಿರ

» ಚಳ್ಳಕೆರೆ

ರಾಜ್ಯ ಚುನಾವಣಾ ಆಯೋಗದ ನಿರ್ದೇಶನದಂತೆ ಜಿಲ್ಲಾಧಿಕಾರಿಗಳ ಮಾರ್ಗದರ್ಶನದಲ್ಲಿ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಚರ್ಚೆ ನಡೆಸಿದ್ದಲ್ಲದೆ, ಚುನಾವಣೆಗೆ ನೇಮಕಗೊಂಡ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗ ಕಾರ್ಯನಿರ್ವಹಿಸುವ ಬಗ್ಗೆಯೂ ಸಹ ಮಾಹಿತಿ ನೀಡಲಾಯಿತು. ತಹಶೀಲ್ದಾರ್ ರೇಹಾನ್ ಪಾಷ ಮಾತನಾಡಿ, ಚುನಾವಣೆಗಳನ್ನು ನಡೆಸುವುದು ಅಧಿಕಾರಿ ಮತ್ತು ಸಿಬ್ಬಂದಿ ವರ್ಗಕ್ಕೆ ಸಾಮಾನ್ಯವಾಗಿದೆ. ಪ್ರತಿಯೊಂದು ಚುನಾವಣೆಯಲ್ಲೂ ಜಾಗೃತೆಯಿಂದ ಎಲ್ಲರೂ ಕಾರ್ಯನಿರ್ವಹಿಸಬೇಕಾಗುತ್ತದೆ. 2024ರ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಈಗಾಗಲೇ ಚುನಾವಣೆ ಶಾಂತಿಯುತವಾಗಿ ನಡೆಸುವ ಉದ್ದೇಶದಿಂದ ತರಬೇತಿ ಶಿಬಿರಗಳ ಮೂಲಕ ಸಿಬ್ಬಂದಿ ಹಾಗೂ ಅಧಿಕಾರಿಗಳನ್ನು ಸಜ್ಜುಗೊಳಿಸಲಾಗುತ್ತಿದೆ ಎಂದರು. ಡಿವೈಎಸ್ಪಿ ಟಿ.ಬಿ .ರಾಜಣ್ಣ ಮಾತನಾಡಿ, ಪ್ರತಿಯೊಂದು ಚುನಾವಣೆ ಶಾಂತಿಯುತ, ಸೌಹಾರ್ಧತವಾಗಿ ನಡೆಯಬೇಕಾದಲ್ಲಿ ಪೊಲೀಸ್ ಇಲಾಖೆಯ ಕಾರ್ಯ ಹೆಚ್ಚು ಪ್ರಾಶಸ್ತ್ಯ ಪಡೆಯುತ್ತದೆ. ಚುನಾವಣಾ ಕಾರ್ಯಕ್ಕಾಗಿ ನಿಯೋಜನೆಗೊಂಡ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗ ಮುಕ್ತ ಮತದಾನಕ್ಕಾಗಿ ಶ್ರಮಿಸಬೇಕಾಗಿದೆ ಎಂದರು.

ಪ್ರತಿಯೊಬ್ಬರೂ ಸಹಸರ್ಕಾರದ ನಿಯಮಗಳ ಅನುಸಾರ ಕಾರ್ಯನಿರ್ವಹಿಸಬೇಕಿದೆ. ಯಾವುದೇ ರೀತಿಯ ಅಹಿತಕರ ಘಟನೆಗಳು ನಡೆಯದಂತೆ ಎಚ್ಚರಿಕೆ ವಹಿಸಬೇಕಿದೆ. ಈಗಾಗಲೇ ಎಲ್ಲಾ ಪೊಲೀಸ್ ಠಾಣಾ ವ್ಯಾಪ್ತಿಗಳಲ್ಲಿ ರೌಡಿಶೀಟರ್ ವ್ಯಕ್ತಿಗಳಿಗೆ ಎಚ್ಚರಿಕೆ ನೀಡಲಾಗಿದೆ. ಚುನಾವಣೆ ಎಲ್ಲಾ ರೀತಿಯಿಂದಲೂ ಶಿಸ್ತುಬದ್ಧವಾಗಿ ನಡೆಸಲು ಇಲಾಖೆ ಸಿಬ್ಬಂದಿ ಹೆಚ್ಚು ಜಾಗೃತೆ ವಹಿಸಬೇಕು ಎಂದರು. ಸಭೆಯಲ್ಲಿ ಠಾಣಾ ಇನ್ಸ್‌ಪೆಕ್ಟರ್ ರಾಜಫಕೃದ್ದೀನ್ ದೇಸಾಯಿ, ತಳಕು ವೃತ್ತ ನಿರೀಕ್ಷಕ ರಾಜಶೇಖರಯ್ಯ, ಪಿಎಸ್ ಐಗಳಾದ ಕೆ.ಸತೀಶ್ ನಾಯ್ಕ, ಲೋಕೇಶ್, ಶಿವರಾಜ್, ಧರಪ್ಪಬಾಳಪ್ಪ ದೊಡ್ಡಮನಿ, ಬಸವರಾಜು ಉಪಸ್ಥಿತರಿದ್ದರು.

ಪ್ರಮುಖ ಸುದ್ದಿ

ಚಳ್ಳಕೆರೆ ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ ಹುಣಸೆಹಣ್ಣು ದರ ನಿಗದಿಯಲ್ಲಿ ಅನ್ಯಾಯದ

ಕಕ್ಷಿದಾರರಿಗೆ ನ್ಯಾಯ ಒದಗಿಸಲು ಮುಂದಾಗಿ

» ಚಳ್ಳಕೆರೆ

ಸಂವಿಧಾನದಿಂದ ರೂಪಿತವಾದ ಕಾನೂನಿನಡಿಯಲ್ಲಿ ಕಕ್ಷಿದಾರರಿಗೆ ನ್ಯಾಯವನ್ನು ಒದಗಿಸುವ ಕೆಲಸವನ್ನು ನ್ಯಾಯಾಲಯಗಳು ಮಾಡುತ್ತಿದ್ದರೂ ಕಕ್ಷಿದಾರರ ನ್ಯಾಯವಿಚಾರದಲ್ಲಿ ವಕೀಲರು ಮಂಡಿಸುವ ವಿಚಾರ, ವಾದವಿವಾದ ಪ್ರಮುಖವಾಗುತ್ತವೆ. ಪ್ರತಿಯೊಬ್ಬ ವಕೀಲನು ನಿರಂತರ ಅಧ್ಯಯನಶೀಲನಾಗಿ ಕಾರ್ಯನಿರ್ವಹಿಸಿದರೆ ಮಾತ್ರ ನ್ಯಾಯವನ್ನು ಒದಗಿಸಲು ಸಾಧ್ಯ. ವೃತ್ತಿ, ಘನತೆ ಮತ್ತು ಮೌಲ್ಯವನ್ನು ಕಾಪಾಡುವ ಜವಾಬ್ದಾರಿ ವಕೀಲರಿದ್ದು, ಅವರ ದಕ್ಷತೆ ಕಾರ್ಯದಿಂದ ಮಾತ್ರ ನ್ಯಾಯಾಂಗಕ್ಕೆ ವಿಶೇಷ ಗೌರವ ಸಲ್ಲುತ್ತದೆ ಎಂದು ಜಿಲ್ಲಾ ಆಡಳಿತಾತ್ಮಕ ನ್ಯಾಯಾಧೀಶರು, ಕರ್ನಾಟಕ ರಾಜ್ಯ ಉಚ್ಚನ್ಯಾಯಾಲಯ ನ್ಯಾಯಾಧೀಶ ಪ್ರದೀಪ್‌ಸಿಂಗ್ ಯೆರೂರ್ ತಿಳಿಸಿದರು.

ಅವರು, ನಗರದ ನ್ಯಾಯಾಲಯದ ಆವರಣದಲ್ಲಿ ಕರ್ನಾಟಕ ರಾಜ್ಯ ವಕೀಲರ ಪರಿಷತ್ ಮತ್ತು ತಾಲ್ಲೂಕು ವಕೀಲರ ಸಂಘ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ವಕೀಲರ ಕಾನೂನು ಕಾರ್ಯಗಾರ ಶಿಬಿರವನ್ನು ಜ್ಯೋತಿ ಬೆಳಗುವ ಮೂಲಕ ಉದ್ಘಾಟಿಸಿ ಮಾತನಾಡಿದರು. ವಕೀಲರಲ್ಲಿಯೇ ನಮ್ಮಲ್ಲಿರುವ ಪ್ರತಿಯೊಂದು ಕಾನೂನಿನ ಬಗ್ಗೆ ವಿಮರ್ಶೆಯಾಗಬೇಕಿದೆ. ವಕೀಲ ವೃತ್ತಿಯಲ್ಲಿ ಸಾಕಷ್ಟು ಅನುಭವ ಪಡೆದ ಹಿರಿಯ ವಕೀಲರು ಇಲ್ಲಿರುವುದು ಸಂತೋಷತಂದಿದೆ ಎಂದರು.

ಕಿರಿಯ ವಕೀಲರು ಹಿರಿಯ ವಕೀಲರ ಮಾರ್ಗದರ್ಶನ ಪಡೆಯುವ ಕೆಲಸವಾಗಬೇಕು. ವಕೀಲರು ಮಾಡುವ ಸೇವಾ ಕಾರ್ಯ ಕಕ್ಷಿದಾರರ ಹಿತವನ್ನು ರಕ್ಷಿಸುವಂತಿರಬೇಕು. ಕರ್ನಾಟಕದ ನ್ಯಾಯಾಂಗ ಇಲಾಖೆ ಇಂದು ಅತ್ಯುನ್ನತ ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಇದರ ಹೆಗ್ಗಳಿಕೆಯಲ್ಲಿ ಇಲ್ಲಿನ ವಕೀಲರ ಪಾಲು ಇದೆ. ನಾವೆಲ್ಲರೂ ನ್ಯಾಯಾಂಗದ ಘನತೆ, ಗೌರವ ಮತ್ತು ಅದರ ಮೇಲ್ಪಂಕ್ತಿ ಉಳಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಬೇಕು ಎಂದರು.

ಉಚ್ಚನ್ಯಾಯಾಲಯದ ನ್ಯಾಯಮೂರ್ತಿ ಎಸ್.ಸುನೀಲ್‌ದತ್‌ಯಾದವ್ ಮಾತನಾಡಿ, ನಾವೆಲ್ಲರೂ ಇಂದು ನ್ಯಾಯಾಧೀಶರಾಗಿ, ವಕೀಲರಾಗಿ ಕಾರ್ಯನಿರ್ವಹಿಸಲು ಮೂಲ ಕಾರಣ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್‌ರವರು. ಅಂಬೇಡ್ಕರ್‌ರವರು ರಚಿಸಿದ ಸಂವಿಧಾನ ನಮ್ಮ ಆಡಳಿತ ಮತ್ತು ನ್ಯಾಯಾಂಗ ಇಲಾಖೆಯ ಭದ್ರಬುನಾದಿ. ಸಂವಿಧಾನವನ್ನು ಹೊರತುಪಡಿಸಿ ನ್ಯಾಯಾಲಯ ಕಾರ್ಯನಿರ್ವಹಿಸಲು ಸಾಧ್ಯವಿಲ್ಲ ಎಂದು ತಿಳಿಸಿದರು.

ಇಂದು ನಾವೆಲ್ಲರೂ ಕಾನೂನಿನಡಿ ಕೆಲಸ ಮಾಡುವ ಸದಾವಕಾಶ ನಮಗೆ ದೊರೆತಿದೆಯಾದರೆ ಅದರ ಕೀರ್ತಿ ಡಾ.ಬಿ.ಆರ್.ಅಂಬೇಡ್ಕರ್‌ರವರಿಗೆ ಸಲ್ಲುತ್ತದೆ. ರಾಜ್ಯದ ನ್ಯಾಯಾಂಗ ಇಲಾಖೆಯ ಕಾರ್ಯಚಟುವಟಿಕೆಗೆ ನೂರಾರು ವರ್ಷಗಳ ಇತಿಹಾಸವಿದೆ. ಈ ಹಿಂದೆ ಎಲ್ಲವನ್ನೂ ಪೆನ್ನು, ಪುಸ್ತಕದ ಮೂಲಕ ಮಾಡಬೇಕಿತ್ತು. ಆದರೆ, ಇಂದು ನಮ್ಮ ಮುಂದೆ ನೂತನ ತಾಂತ್ರಿಕತೆಯ ಗಣಕಯಂತ್ರವಿದೆ. ಯಾವುದೇ ಪ್ರಕರಣದ ಸಂಪೂರ್ಣ ಮಾಹಿತಿಯನ್ನು ಗಣಕಯಂತ್ರದ ಮೂಲಕ ಕೆಲವೇ ನಿಮಿಷದಲ್ಲಿ ಪಡೆಯಬಹುದಾಗಿದೆ, ಗಣಕಯಂತ್ರದ ವೇಗ ನಮ್ಮ ವೇಗಕ್ಕಿಂತ ಅಧಿಕವಾಗಿದೆ. ನಾವೂ ಸಹ ಅದರ ಜೊತೆಯಲ್ಲೇ ಓಡಾಡಿಕೊಂಡು ಕಾರ್ಯನಿರ್ವಹಿಸುವ ವಾತಾವಣವನ್ನು ನಾವೆಲ್ಲರೂ ಮಾಡಬೇಕು. ಸಮಾಜದಲ್ಲಿ ವಕೀಲರೂ ಸಹ ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸುತ್ತಾರೆ ಎಂಬುವುದನ್ನು ಜನತೆಗೆ ಮನದಟ್ಟು ಮಾಡಿಕೊಡುವ ಕೆಲಸವಾಗಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ತಾಲ್ಲೂಕು ವಕೀಲರ ಸಂಘದ ಅಧ್ಯಕ್ಷ ಕೆ.ಎಂ.ನಾಗರಾಜು, ಪ್ರತಿನಿತ್ಯ ನೂರಾರು ವಕೀಲರು ಹಲವಾರು ಪ್ರಕರಣಗಳಲ್ಲಿ ಸಕ್ರಿಯವಾಗಿ ಭಾಗವಹಿಸುತ್ತಾರೆ. ನ್ಯಾಯಾಲಯದ ಕಾರ್ಯಕಲಾಪಗಳಲ್ಲಿ ಭಾಗವಹಿಸಿ ಕಕ್ಷಿದಾರರ ಹಿತವನ್ನು ರಕ್ಷಿಸುವ ಕೆಲಸ ಮಾಡುವ ಸಂದರ್ಭದಲ್ಲಿ ಇತ್ತೀಚಿನ ಕಾನೂನಿನ ಹಲವಾರು ಆಯಾಮಗಳ ಬಗ್ಗೆ ಅರಿಯಬೇಕಿದೆ. ಇದು ನಮ್ಮೆಲ್ಲರ ವೃತ್ತಿ ಕೌಶಲ್ಯಕ್ಕೆ ಮಾರ್ಗದರ್ಶನವಾಗುತ್ತದೆ. ಆದ್ದರಿಂದ ಈ ಕಾರ್ಯಗಾರವನ್ನು ಹಮ್ಮಿಕೊಂಡಿದ್ದು, ಹೈಕೋರ್ಟ್‌ನ ನ್ಯಾಯಾಮೂರ್ತಿಗಳು ಆಗಮಿಸಿ ನಮಗೆ ಮಾರ್ಗದರ್ಶನ ನೀಡಿದ್ದಾರೆ. ನಮ್ಮೆಲ್ಲರಿಗೂ ಹೊಸ ಶಕ್ತಿಯನ್ನು ತುಂಬಿದ್ದಾರೆಂದು ಪ್ರಶಂಸಿಸಿ, ಅಭಿನಂದನೆ ಸಲ್ಲಿಸಿದರು.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಕೆ.ಬಿ.ಗೀತ, ಹಿರಿಯ ಸಿವಿಲ್ ನ್ಯಾಯಾಧೀಶೆ ರೇಷ್ಮ ಕಲಕಪ್ಪ ಗೋಣಿ, ಜೆಎಂಎಫ್‌ಸಿ ನ್ಯಾಯಾಧೀಶ ಗೌಡಜಗದೀಶ್‌ರುದ್ರೆ, ಕರ್ನಾಟಕ ರಾಜ್ಯ ವಕೀಲರ ಪರಿಷತ್ ಸದಸ್ಯ ಎಸ್.ಎಫ್. ಗೌತಮ್‌ಚಂದ್, ಪ್ರಾಧಿಕಾರ ಸದಸ್ಯ ವಿಜಯ್, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿ, ಮೊಳಕಾಲ್ಮೂರು ವಕೀಲರ ಸಂಘದ ಅದ್ಯಕ್ಷ ಆನಂದ, ಹಿರಿಯ ವಕೀಲರಾದ ಟಿ.ತಿಮ್ಮಣ್ಣ, ಜಿ.ಶರಣಪಯ್ಯ, ಶಿವುಯಾದವ್, ದೊಡ್ಡರಂಗಪ್ಪ, ಜಿ.ಎಂ. ಆನಂದಪ್ಪ, ಕೆ.ಜಯಪ್ಪ, ಜಗದೀಶ್‌ನಾಯಕ, ಎನ್.ಬೀರಪ್ಪ, ಆರ್.ಪಿ.ತಿಪ್ಪೇಸ್ವಾಮಿ, ದೊರೆನಾಗರಾಜು, ಬಿ.ಟಿ.ಶ್ಯಾಮಲ, ರಾಜೇಶ್ವರಿ, ಜಿ.ಕೆ.ಪವಿತ್ರ, ಉಪಾಧ್ಯಕ್ಷ ಬಿ.ಪಾಲಯ್ಯ, ಪ್ರಧಾನ ಕಾರ್ಯದರ್ಶಿ ಎಂ.ಸಿದ್ದರಾಜು, ಖಜಾಂಚಿ ಟಿ.ರುದ್ರಯ್ಯ, ಸಹ ಕಾರ್ಯದರ್ಶಿ ಎ.ರಾಮಕೃಷ್ಣ, ಜಡೇಕುಂಟೆಕುಮಾರ್, ನಾಗರಾಜು, ಶ್ರೀನಿವಾಸ್‌ಮೂರ್ತಿ ಉಪಸ್ಥಿತರಿದ್ದರು.

ಫಾಸ್ಟ್ ನ್ಯೂಸ್

ಪ್ರಜಾಪ್ರಭುತ್ವ, ಸಂವಿಧಾನ ಉಳಿಯಬೇಕಾದರೆ ಕಾಂಗ್ರೆಸ್‌ನಿಂದ ಸಾಧ್ಯ

» ಚಿತ್ರದುರ್ಗ

ಪ್ರಜಾಪ್ರಭುತ್ವ ಮತ್ತು ಸಂವಿಧಾನ ಉಳಿಯಬೇಕಾದರೆ ಕಾಂಗ್ರೆಸ್‌ನಿಂದ ಮಾತ್ರ ಸಾಧ್ಯ ಎಂದು ಕೆ.ಪಿ.ಸಿ.ಸಿ. ಉಪಾಧ್ಯಕ್ಷರು ಬೆಂಗಳೂರು ವಿಭಾಗದ ಉಸ್ತುವಾರಿ ಪಿ.ಆರ್.ರಮೇಶ್ ಕಾರ್ಯಕರ್ತರನ್ನು ಎಚ್ಚರಿಸಿದರು. ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಇತ್ತೀಚೆಗೆ ಕರೆಯಲಾಗಿದ್ದ ಬಿ.ಎಲ್.ಎ. ಗಳ ಸಭೆಯನ್ನುದ್ದೇಶಿಸಿ ಮಾತನಾಡುತ್ತ ವಿಧಾನಸಭಾ ಚುನಾವಣಾ ಪೂರ್ವದಲ್ಲಿಯೇ ರಾಜ್ಯದ ಜನತೆಗೆ ನೀಡಲಾಗಿದ್ದ ಭರವಸೆಗಳನ್ನು ಪೂರೈಸಲಾಗಿದೆ. ಈ ಬಾರಿಯ ಪಾರ್ಲಿಮೆಂಟ್ ಚುನಾವಣೆಯಲ್ಲಿ ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರಬೇಕು. ಪಕ್ಷಕ್ಕಾಗಿ ಶ್ರಮಪಟ್ಟು ದುಡಿಯುತ್ತಿರುವ ಕಾರ್ಯಕರ್ತರು ನಮಗೆ ಏನು ಅಧಿಕಾರ ಸಿಗಲಿಲ್ಲವೆಂದು ಕೊರಗುವುದು ಬೇಡ. ನಿಮ್ಮ ಸೇವೆಯನ್ನು ಗುರುತಿಸಿ ನಾಯಕರುಗಳು ಒಂದಲ್ಲ ಒಂದು ದಿನ ಅಧಿರಾರ ನೀಡುತ್ತಾರೆ. ಅಲ್ಲಿಯವರೆಗೂ ಸಮಾಧಾನದಿಂದಿರಿ ಎಂದು ಕರೆ ನೀಡಿದರು. ಜಿಲ್ಲೆಯ ಆರು ಕ್ಷೇತ್ರಗಳ ಪೈಕಿ ಐದರಲ್ಲಿ ಕಾಂಗ್ರೆಸ್ ಗೆದ್ದಿದೆಯೆಂದರೆ ಅದಕ್ಕೆ ಕಾರ್ಯಕರ್ತರ ಪರಿಶ್ರಮ ಕಾರಣ. ರಾಜ್ಯದಲ್ಲಿ 53 ಸಾವಿರ ಬೂತ್‌ಗಳಿವೆ. 33 ಸಾವಿರ ಬಿ.ಎಲ್.ಎ.ಗಳಿದ್ದಾರೆ. ಈಗ ಬಿ.ಎಲ್.ಎ. ಟುಗಳನ್ನು ನೇಮಕ ಮಾಡಬೇಕು. ಅದರ ಜವಾಬ್ದಾರಿಯನ್ನು ಜಿಲ್ಲೆಯ ಎಲ್ಲಾ ಶಾಸಕರುಗಳಿಗೆ ನೀಡಲಾಗಿದೆ. ಕೋಮುವಾದಿ ಬಿಜೆಪಿ.ಯವರು ಏನು ಮಾಡಲಿಲ್ಲವೆಂದರೂ ಗೆಲ್ಲುತ್ತೇವೆಂಬ ಭ್ರಮೆಯಲ್ಲಿದ್ದಾರೆ. ರಾಜ್ಯದಿಂದ ಗೆದ್ದು ಹೋಗಿರುವ ಬಿಜೆಪಿ. ಎಂ.ಪಿ.ಗಳು ಪಾರ್ಲಿಮೆಂಟ್‌ನಲ್ಲಿ ರಾಜ್ಯದ ಪರ ಧ್ವನಿ ಎತ್ತುತ್ತಿಲ್ಲ. ಪ್ರಜಾಪ್ರಭುತ್ವ ಕುಸಿಯುತ್ತಿದೆ. ಮುಂದಿನ ಮಕ್ಕಳ ಭವಿಷ್ಯದ ದೃಷ್ಟಿಯಿಂದ ಸಂವಿಧಾನವನ್ನು ಉಳಿಸಬೇಕಾಗಿದೆ ಎಂದರು. ಬಿಎಲ್ಎ. ಟುಗಳ ಜೊತೆ 20 ಜನರ ತಂಡ ರಚನೆಯಾಗುತ್ತದೆ. ಪ್ರತಿ ಬೂತ್‌ನಲ್ಲಿ ಎಲ್ಲಾ ಜಾತಿ ಧರ್ಮದವರಿರಬೇಕು. ಕೇಡರ್ ಬೇಸ್ ಪಾರ್ಟಿ ರೀತಿ ಕೆಲಸ ಮಾಡುತ್ತೇವೆ. ಬೂತ್‌ನಲ್ಲಿ ಪಕ್ಷ ಬೆಳೆಯಬೇಕಿದೆ. ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ, ನಗರಸಭೆ ಚುನಾವಣೆಗೆ ಇದು ಬುನಾದಿಯಾಗಲಿದೆ ಎಂದರು ಹೇಳಿದರು. ಚಿತ್ರದುರ್ಗ ಲೋಕಸಭಾ ಬಿಎಲ್ಎ. ನೇಮಕಾತಿ ಉಸ್ತುವಾರಿ ಎ.ಎಂ.ಅಮೃತೇಶ್ವರಸ್ವಾಮಿ, ಮುನೀರ್, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ. ತಾಜ್‌ಪೀರ್, ಪ್ರಧಾನ ಕಾರ್ಯದರ್ಶಿ ಡಿ.ಎನ್. ಮೈಲಾರಪ್ಪ, ಅಲ್ಪಸಂಖ್ಯಾತ ವಿಭಾಗದ ಅಧ್ಯಕ್ಷ ಅಬ್ದುಲ್ಲಾ, ಪರಿಶಿಷ್ಟ ಪಂಗಡ ವಿಭಾಗದ ಅಧ್ಯಕ್ಷ ಹೆಚ್.ಅಂಜಿನಪ್ಪ, ಪ್ರೊಫೆಷನಲ್ ಸೆಲ್ ವಿಭಾಗದ ಅಧ್ಯಕ್ಷ ಮಹಡಿ ಶಿವಮೂರ್ತಿ, ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಯು.ಲಕ್ಷ್ಮಿಕಾಂತ್, ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಆರ್.ಪ್ರಕಾಶ್ ವೇದಿಕೆಯಲ್ಲಿದ್ದರು. ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಎಂಟು ವಿಧಾನಸಭಾ ಕ್ಷೇತ್ರಗಳ ಕಾಂಗ್ರೆಸ್ ಪದಾಧಿಕಾರಿಗಳು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರುಗಳು, ಮುಂಚೂಣಿ ಘಟಕಗಳ ಜಿಲ್ಲಾಧ್ಯಕ್ಷರುಗಳು ಸಭೆಯಲ್ಲಿ ಹಾಜರಿದ್ದರು.

ವಕೀಲರ ಸಂಘದ 45 ಮಂದಿ ವಿರುದ್ಧ ಎಫ್‌ಐಆರ್: ಪ್ರತಿಭಟನೆ

» ಚಿತ್ರದುರ್ಗ

ಸುಳ್ಳು ದೂರಿನ ಮೇರೆಗೆ ರಾಮನಗರ ಐಜೂರು ಪೊಲೀಸರು ವಕೀಲರ ಸಂಘದ 45 ಮಂದಿ ವಿರುದ್ಧ ಎಫ್‌ಐಆರ್ ದಾಖಲಿಸಿರುವುದನ್ನು ಖಂಡಿಸಿ ಚಿತ್ರದುರ್ಗ ಜಿಲ್ಲಾ ವಕೀಲರ ಸಂಘದಿಂದ ಇಂದು ಪ್ರತಿಭಟನೆಯನ್ನು ನಡೆಸಿ ಕೇಸು ದಾಖಲು ಮಾಡಿರುವ ಐಜೂರು ಪೊಲೀಸ್ ಠಾಣಾಧಿಕಾರಿ ಸೈಯದ್ ತನೀರ್ ಹುಸೇನ್ ರವರನ್ನು ತಕ್ಷಣದಿಂದ ಅಮಾನತ್ತು ಮಾಡಬೇಕೆಂದು ಒತ್ತಾಯಿಸಲಾಯಿತು. ದಿನಾಂಕ 19–2–2024 ರಂದು ಸೋಮವಾರ ರಾಮನಗರ ಜಿಲ್ಲಾ ವಕೀಲರ ಸಂಘದ 40 ಜನ ವಕೀಲರ ಮೇಲೆ ಎಫ್.ಐ.ಆರ್. ನಂ:9/2024ನ್ನು ದಾಖಲುಮಾಡಿರುವ ಐಜೂರು ಪೊಲೀಸ್ ಠಾಣಾಧಿಕಾರಿ ಯಾದ ಸೈಯದ್ ತನೀರ್ ಹುಸೇನ್ ರವರನ್ನು ತಕ್ಷಣದಿಂದ ಅಮಾನತ್ತು ಮಾಡಬೇಕೆಂದು ಒತ್ತಾಯಿಸಿ ಈ ದಿನ ಚಿತ್ರದುರ್ಗ ವಕೀಲರ ಸಂಘದಲ್ಲಿ ಸರ್ವ ಸದಸ್ಯರ ಸಭೆಯನ್ನು ಕರೆದು ಸಂಘದ ಹಿರಿಯ ಕಿರಿಯ ಮಹಿಳಾ ವಕೀಲರುಗಳಿಂದ ಅವಹಾಲನ್ನು ಪಡೆದು ಸಂಘವು ಸದರಿ ಐಜೂರು ಪೊಲೀಸ್ ಠಾಣಾಧಿಕಾರಿಯಾದ ಸೈಯದ್ ತನ್ನೀರ್ ಹುಸೇನ್ ರವರ ವಿರುದ್ಧವಾಗಿ ಕ್ರಮ ಕೈಗೊಳ್ಳಲು ತೀರ್ಮಾನಿಸಲಾಯಿತು

ನಗರದ ನ್ಯಾಯಾಲಯದ ಆವರಣದಿಂದ ಜಿಲ್ಲಾಧಿಕಾರಿಗಳ ಕಚೇರಿಯವರೆಗೂ ಪ್ರತಿಭಟನಾ ಮೆರವಣಿಗೆಯನ್ನು ನೆಡೆಸಿದ ನ್ಯಾಯವಾದಿಗಳು ತದ ನಂತರ ಒನಕೆ ಓಬವ್ವ ವೃತ್ತದಲ್ಲಿ ಮಾನವ ಸರಪಳಿ ನಿರ್ಮಾಣ ಮಾಡಿ ನಂತರ ಜಿಲ್ಲಾಧಿಕಾರಿಗಳಿಗೆ ಮನವಿಯನ್ನು ಸಲ್ಲಿಸಿದರು.

ಬಸವಣ್ಣನವರ ಸಮಾನತೆ ತತ್ವ ಸಾಕಾರಗೊಳಿಸಲು ಗ್ಯಾರಂಟಿ ಯೋಜನೆಗಳ ಜಾರಿ: ಸಚಿವ ಡಿ.ಸುಧಾಕರ್

» ಚಿತ್ರದುರ್ಗ

ಸರ್ವರಿಗೂ ಸಮಪಾಲು, ಸರ್ವರಿಗೂ ಸಮಬಾಳು ಎಂಬ ಬಸವಣ್ಣನವರ ತತ್ವ ಸಾಕಾರಗೊಳಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಪಂಚ ಗ್ಯಾರೆಂಟಿ ಯೋಜನೆಗಳನ್ನು ಜಾರಿಗೊಳಿಸಿದೆ ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಪ್ರತಿಪಾದಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ, ವಿಶ್ವಗುರು ಬಸವಣ್ಣ ಸಾಂಸ್ಕೃತಿಕ ನಾಯಕ ಎಂಬ ಅಡಿ ಬರಹ ಇರುವ ಬಸವಣ್ಣನವರ ನೂತನ ಭಾವಚಿತ್ರ ಅನಾವರಣಗೊಳಿಸಿ ಮಾತನಾಡಿದರು.

ಬಸವಣ್ಣನವರನ್ನು ರಾಜ್ಯದ ಸಾಂಸ್ಕೃತಿಕ ನಾಯಕ ಎಂದು ಘೋಷಿಸುವ ಮೂಲಕ ಸರ್ಕಾರ ಬಸವ ತತ್ವಗಳಿಗೆ ಹೆಚ್ಚಿನ ಮಹತ್ವ ನೀಡಿದೆ. ಬಸವಣ್ಣ ಒಂದು ಜಾತಿಗೆ ಸೀಮಿತರಾದವರಲ್ಲ. ನಾಡಿನ ಎಲ್ಲಾ ವರ್ಗದ ಜನರಿಂದ ಪೂಜನೀಯವಾಗಿದ್ದಾರೆ. ಈ ಹಿಂದೆ ರಾಜ್ಯ ಸರ್ಕಾರದಿಂದ ಅನುಮೋದಿಸಿದ್ದ ಬಸವಣ್ಣನವರ ಅಧಿಕೃತ ಭಾವಚಿತ್ರದ ಅಡಿಯಲ್ಲಿ ಇನ್ನು ಮುಂದೆ ವಿಶ್ವಗುರು ಬಸವಣ್ಣ ಸಾಂಸ್ಕೃತಿಕ ನಾಯಕ ಎಂಬ ಅಡಿ ಬರಹ ಇರಲಿದೆ. ರಾಜ್ಯದ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಬಸವಣ್ಣನ ಭಾಚಿತ್ರದ ಕಡ್ಡಾಯ ಅಳವಡಿಕೆಗೆ ಸೂಚನೆಯನ್ನು ನೀಡಲಾಗಿದೆ ಎಂದು ಸಚಿವ ಡಿ.ಸುಧಾಕರ್ ಹೇಳಿದರು. ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್. ಕೆ.ಮಲ್ಲಿಕಾರ್ಜುನ್, ಸಮಾಜ ಮುಖಂಡರಾದ ಮಹಡಿ ಶಿವಮೂರ್ತಿ, ಮಹೇಶ್, ಕೆಇಬಿ ಷಣ್ಮುಖಪ್ಪ, ದಯಾನಂದ, ರಂಗ ನಿರ್ದೇಶಕ ಕೆ.ಪಿ.ಎಂ.ಗಣೇಶಯ್ಯ ಸೇರಿದಂತೆ ರಾಷ್ಟ್ರೀಯ ಬಸವ ದಳ, ಪಂಚಮಸಾಲಿ ಲಿಂಗಾಯಿತ ಮುಖಂಡರು ಉಪಸ್ಥಿತರಿದ್ದರು.

ಕರ್ನಾಟಕ ರಾಜ್ಯದಲ್ಲಿ ಭೋವಿ ಸಮಾಜ ಒಗ್ಗಟಾಗಿ ಇದೆ

» ಚಿತ್ರದುರ್ಗ

ಕರ್ನಾಟಕ ರಾಜ್ಯದಲ್ಲಿ ಭೋವಿ ಸಮಾಜ ಒಗ್ಗಟಾಗಿ ಇದೆ. ಇಮ್ಮಡಿ ಸಿದ್ದರಾಮಶ್ವರ ಶ್ರೀಗಳ ಆದೇಶವನ್ನು ಪಾಲಿಸುವುದರ ಮೂಲಕ ಸಮಾಜ ಅವರ ಒಟ್ಟಿಗೆ ಇದೆ ಎಂದು ಕೆಪಿಸಿಸಿಯ ಪ್ರಧಾನ ಕಾರ್ಯದರ್ಶಿ ನೇರ್ಲಗುಂಟೆ ರಾಮಪ್ಪ ತಿಳಿಸಿದರು. ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನ ಕರಿಕೆರೆ ಗ್ರಾಮದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಸಿದ್ದರಾಮೇಶ್ವರ 852ನೇ ಜಯಂತೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಬೋವಿ ಸಮಾಜ ಶ್ರೀಗಳ ಹಿಂದೆ ನಿಂತಿದೆ ಅವರ ಮಾರ್ಗದರ್ಶನದಂತೆ ನಡೆಯುತ್ತಿದೆ. ನಮ್ಮ ಸಮಾಜ ಶ್ರೀಗಳ ನೇತೃತ್ವದಲ್ಲಿ ಸುಸ್ಥಿರವಾಗಿದೆ. ಬಾಗಲಕೋಟೆಯಲ್ಲಿ ನಡೆದ ಸಮಾವೇಶದಲ್ಲಿ ಮುಖ್ಯಮಂತ್ರಿಗಳ ಮುಂದೆ ಸಮಾಜ ಹಲವಾರು ಬೇಡಿಕೆಯನ್ನು ಇಟ್ಟಿತು ಅದರಲ್ಲಿ ಅಕ್ಕಮಹಾದೇವಿ ವಿಶ್ವ ವಿದ್ಯಾಲಯದಲ್ಲಿ ಸಿದ್ದರಾಮೇಶ್ವರ ಅಧ್ಯಯನ ಪೀಠವನ್ನು ಪ್ರಾರಂಭ ಮಾಡಲು ನಿನ್ನೆ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯರವರು ಮಂಡಿಸಿದ ಆಯವ್ಯಯದಲ್ಲಿ ಸಿದ್ದರಾಮಯ್ಯರವರು ಸಮ್ಮತಿಸಿದ್ದಾರೆ ಇದಿರಂದ ನಮ್ಮ ಸಮಾಜದ ಒಂದು ಬೇಡಿಕೆ ಈಡೇರಿದಂತೆ ಆಗಿದೆ ರಾಮಪ್ಪ ತಿಳಿಸಿದರು. ಸಮಾಜದ ಮತ್ತೊಂದು ಬೇಡಿಕೆಯಾದ ಲೋಕಸೇವಾ ಆಯೋಗದಲ್ಲಿ ನಮ್ಮ ಬೋವಿ ಸಮಾಜದ ಸದಸ್ಯರನ್ನು ನೇಮಕ ಮಾಡುವುದು ಹಾಗೂ 2024ರ ಲೋಕಸಭಾ ಚುನಾವಣೆಯಲ್ಲಿ ಚಿತ್ರದುರ್ಗ ಲೋಕಸಭಾ ಕ್ಷೇತ್ರಕ್ಕೆ ಕಾಂಗ್ರೆಸ್ ಪಕ್ಷದಿಂದ ನಮ್ಮ ಸಮುದಾಯದವರಿಗೆ ಟೀಕೇಟ್ ನೀಡುವ ಬಗ್ಗೆ ಮುಖಂಡರು ಒಲವು ತೋರುತ್ತಿದ್ದಾರೆ ಇದರ ಬಗ್ಗೆಯೂ ಸಹಾ ಮನವಿಯನ್ನು ಮಾಡಲಾಗಿತ್ತು ಇದನ್ನು ಸಹಾ ಮುಖ್ಯಮಂತ್ರಿಗಳು ಪರಿಗಣಿಸುತ್ತಾರೆ ಎಂಬ ನಂಬಿಕೆ ಇದೆ ಎಂದು ತಿಳಿಸಿದರು. ಕಾರ್ಯಕ್ರಮಕ್ಕೂ ಮುನ್ನಾ ಕರಿಕೆರೆ ಗ್ರಾಮದಲ್ಲಿ ಬೋವಿ ಸಮಾಜದ ಶ್ರೀಗಳನ್ನು ಹಾಗೂ

ಮಿಷನ್ ಶಕ್ತಿ ಯೋಜನೆ: ಜೆಂಡರ್ ಸ್ಪೆಷಲಿಸ್ಟ್ ಹುದ್ದೆ